ಸಂಪುಟ : 9 ಸಂಚಿಕೆ 70 ಪುಟ : 4 ಬೆಲೆ: 3.00 ಬುಧವಾರ ಎಪ್ರಿಲ್ 17 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 70 Pages : 4 Price : 3.00 Wednesday April 17 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಮತಗಟ್ಟೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಏಪ್ರಿಲ್ 10ರಂದು ತರಬೇತಿ ಕಾರ್ಯಾಗಾರ ನಡೆದಿದೆ. ಈ ತರಬೇತಿ ಕಾರ್ಯಾಗಾರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಹಲವಾರು ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳು ಸಕಾರಣ ನೀಡದೇ ಗೈರಾಗಿರುವುದು ಕಂಡುಬಂದಿದೆ. ಇದನ್ನು ಚುನಾವಣಾ ಆಯೋಗ ಗಂಭೀರವಾಗಿ ಪರಿಗಣಿಸಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ತಿಳಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿರುವ ಅಧಿಕಾರಿಗಳು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ಹಾಜರಾಗಬೇಕು. ತಪ್ಪಿದಲ್ಲಿ ಚುನಾವಣಾ ಆಯೋಗದ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಎಚ್ಚರಿಕೆ ನೀಡಿದ್ದಾರೆ.

### ಹಾವೇರಿ ಜಿಲ್ಲೆಯ ಬ್ಯಾಡಗಿ ವಿಧಾನಸಭಾ ಕ್ಷೇತ್ರದಲ್ಲಿ ಬಸವರಾಜ ಬೊಮ್ಮಾಯಿ ಚುನಾವಣಾ ಪ್ರಚಾರ

## ಮೋದಿಯವರ ಆಳ್ವಿಕೆಯಲ್ಲಿ ದೇಶ ಬಲಿಷ್ಠವಾಗಿದೆ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ತುಂತುರು ಹನಿ ನೀರಾವರಿ ಪೈಪುಗಳು ಹಾಗೂ ರೈತರ ಪಂಪ್‌ಸೆಟ್‌ಗೆ ಟಿಸಿ ಅಳವಡಿಸಲು ಕಮಿಷನ್ ಹೆಚ್ಚಳ ಮಾಡಿರುವುದರಿಂದ ರೈತರಿಗೆ ಭಾರವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಹಾವೇರಿ ಜಿಲ್ಲೆಯ ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಕನಕಾಪುರ, ಕುರುಬಗೊಂಡ, ಕಬ್ಬೂರ, ಕುಳೇನೂರು, ಸಂಗೂರು, ದೇವಿಹೊಸೂರು, ಆಲದಕಟ್ಟಿ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಎಲ್ಲ ಬೆಲೆಯೂ ಹೆಚ್ಚಳವಾಗಿದೆ. ಸ್ಟ್ಯಾಂಪ್ ಡ್ಯೂಟಿ ಹೆಚ್ಚಳವಾಗಿದೆ. ಮದ್ಯದ ದರವೂ ಹೆಚ್ಚಳವಾಗಿದೆ. ಈ ಸರ್ಕಾರದ ಅವಧಿಯಲ್ಲಿ ಎಲ್ಲವೂ ದುಬಾರಿಯಾಗಿದೆ ಎಂದು ಹೇಳಿದರು.

ನರೇಂದ್ರ ಮೋದಿಯವರ ನೇತೃತ್ವದಲ್ಲಿ ಈ ಬಾರಿ ಚುನಾವಣೆಯಲ್ಲಿ ಬಿಜೆಪಿ 400ಕ್ಕಿಂತ ಹೆಚ್ಚು ಸ್ಥಾನ ಗೆಲ್ಲುವುದು ಗ್ಯಾರಂಟಿ. ಕಾಂಗ್ರೆಸ್‌ನವರು ಮಹಿಳೆಯರಿಗೆ



ಒಂದು ಲಕ್ಷ ಕೊಡುವುದಾಗಿ ಹೇಳುತ್ತಿದ್ದಾರೆ. ಅವರು ಬಹುಮತಕ್ಕೆ ಬೇಕಾದಷ್ಟು ಸ್ಥಾನದಲ್ಲಿ ಸ್ಪರ್ಧೆ ಮಾಡಿಲ್ಲ. ಅವರು ರಾಜ್ಯದ ಜನರಿಗೆ ಸುಳ್ಳು ಹೇಳಿ ಮೋಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಮೋದಿಯವರು ಅಸಾಧ್ಯವನ್ನು ಸಾಧ್ಯ ಮಾಡುವ ನಾಯಕ. ದೇಶದ ನೂರು ಕೋಟಿ ಮನೆಗಳಿಗೆ ಜಲ ಜೀವನ್ ಮಿಷನ್ ಅಡಿಯಲ್ಲಿ ಎಲ್ಲರ ಮನೆಗಳಿಗೂ ನೀರು ಕೊಡುತ್ತಿದ್ದಾರೆ. ರಾಜ್ಯದಲ್ಲಿ ಮೂರು ವರ್ಷದಲ್ಲಿ 30 ಲಕ್ಷ ಮನೆಗಳಿಗೆ ಜಲ ಜಿವನ್ ಮಿಷನ್ ಅಡಿ ಮನೆಗಳಿಗೆ ನಳದ ನೀರು ಒದಗಿಸಲಾಗಿದೆ. ಲಾಲ್ ಬಹಾದ್ದೂರು ಶಾಸ್ತ್ರೀ ನಂತರ ಅಪ್ಪಟ ದೇಶ ಪ್ರೇಮಿ ನರೇಂದ್ರ ಮೋದಿಯವರು. ಅವರು ಕೋವಿಡ್ ಸಂದರ್ಭದಲ್ಲಿ ಎಲ್ಲರಿಗೂ ಉಚಿತ ಲಸಿಕೆ ಕೊಡಿಸಿ ಜೀವ ಉಳಿಸಿದ್ದಾರೆ. ಎಲ್ಲರಿಗೂ 5 ಕೆಜಿ ಉಚಿತ ಅಕ್ಕಿ ನೀಡುತ್ತಿದ್ದಾರೆ. ಮನೆಗಳಿಗೆ ನಳದ ಮೂಲಕ ನೀರು ಕೊಡುತ್ತಿದ್ದಾರೆ. ನಾವು ಅವರ ಋಣ ತೀರಿಸಬೇಕಾಗಿದೆ.

ಪ್ರಧಾನಿ ನರೇಂದ್ರ ಮೋದಿಯವರು ಭಾರತವನ್ನು ಹತ್ತು ವರ್ಷದಲ್ಲಿ ದುರ್ಬಲ ದೇಶವನ್ನು ಬಲಿಷ್ಠ ದೇಶವನ್ನಾಗಿ ಮಾಡಿದ್ದಾರೆ. ಅವರ ಬಗ್ಗೆ ದೇಶಾದ್ಯಂತ ಅಲೆ ಇದೆ. ಅವರು ಅಪ್ಪಟ ದೇಶ ಭಕ್ತ. ಅವರ ತಾಯಿ ತೀರಿಕೊಂಡಿದ್ದರೂ ಅಂತ್ಯಸಂಸ್ಕಾರ ಮಾಡಿ ದೇಶ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಮನಮೋಹನ ಸಿಂಗ್ ಕಾಲದಲ್ಲಿ ಭಯೋತ್ಪಾದಕರ ದಾಳಿ ಹೆಚ್ಚಿತ್ತು. ಮೋದಿಯವರು ಬಂದ ಮೇಲೆ ಅವರ ತಾಣಗಳಿಗೆ ಹೊಕ್ಕು ಹೊಡೆದು ಬಂದರು. ಭಯೋತ್ಪಾಕದರಿಗೂ ಭಯ ಹುಟ್ಟುವಂತೆ ಮಾಡಿದ್ದಾರೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಬಿಜೆಪಿಗೆ ಮತ ಹಾಕುವ ಮೂಲಕ ಮೋದಿಯವರ ಋಣ ತೀರಿಸೋಣ ಎಂದು ಹೇಳಿದರು.

ಪ್ರಚಾರದ ಸಂದರ್ಭದಲ್ಲಿ ಮಾಜಿ ಸಚಿವ ಮುರುಗೇಶ ನಿರಾಣಿ, ಮಾಜಿ ಶಾಸಕರಾದ ವಿರೂಪಾಕ್ಷಪ್ಪ ಬಳ್ಳಾರಿ, ಶಿವರಾಜ ಸಜ್ಜನ್ ಹಾಜರಿದ್ದರು.

## ಬಿ.ಎಸ್. ದ್ವಾರಕೀಶ ನಿಧನಕ್ಕೆ ತೋಂಟದ ಶ್ರೀಗಳ ಶೋಕ

■ ವಿಜಯಸಾಕ್ಷಿ ಸುದ್ದಿ, ಗದಗ



ಹಿರಿಯ ಚಿತ್ರನಟ, ಕರ್ನಾಟಕದ ಸಾಂಸ್ಕೃತಿಕ ವ್ಯಕ್ತಿಗಳಲ್ಲಿ ಒಬ್ಬರಾಗಿದ್ದ ಡಾ. ಬಿ.ಎಸ್. ದ್ವಾರಕೀಶ ಅವರು ತಮ್ಮ 81ನೇ ವಯಸ್ಸಿನಲ್ಲಿ ವಿಧಿವಶರಾದುದು ಸಾಂಸ್ಕೃತಿಕ ಲೋಕದ ಉಜ್ವಲ ನಕ್ಷತ್ರವೊಂದು ಕಣ್ಮರೆಯಾದಂತಾಗಿದೆ ಎಂದು ಗದಗ-ಡಂಬಳ ಜಗದ್ಗುರು ತೆ-ೂಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಮ್ಮ ಶೋಕ ವ್ಯಕ್ತಪಡಿಸಿದ್ದಾರೆ.

ಸತತ ಆರು ದಶಕಗಳ ಕಾಲ ಚಲನಚಿತ್ರರಂಗದ ನಟರಾಗಿ, ನಿರ್ದೇಶಕರಾಗಿ, ನಿರ್ಮಾಪಕರಾಗಿ ಸೇವೆ ಸಲ್ಲಿಸಿದ್ದ ಅವರು, ಅನೇಕ ಚಿತ್ರಕಥೆಗಳನ್ನು ರಚಿಸಿ ಖ್ಯಾತನಾಮರಾಗಿದ್ದರು. ಡಾ. ರಾಜಕುಮಾರ, ಡಾ. ವಿಷ್ಣುವರ್ಧನ ಮುಂತಾದ ನಾಯಕ ನಟರೊಂದಿಗೆ ಪಾತ್ರ ನಿರ್ವಹಿಸಿದ್ದ ಅವರು, ಹಾಸ್ಯನಟರೆಂದೇ ಹೆಸರುವಾಸಿಯಾಗಿದ್ದರು. ಮೇಯರ್ ಮುತ್ತಣ್ಣ, ಕುಳ್ಳ ಏಜಂಟ್, ಭಾಗ್ಯವಂತರು, ಕುಳ್ಳ-ಕುಳ್ಳಿ, ಕಿಟ್ಟು-ಪುಟ್ಟು ಇಂದಿನ ರಾಮಾಯಣ, ಭಾಗ್ಯವಂತರು ಮುಂತಾದ ಚಿತ್ರಗಳಲ್ಲಿ ಅವರು ತುಂಬ ಮನೋಜ್ಞವಾಗಿ ಅಭಿನಯಿಸಿದ್ದರು.

ಚಲನಚಿತ್ರರಂಗದಲ್ಲಿ ಅವರಿಗೆ ವಿಶೇಷ ಗೌರವದ ಸ್ಥಾನವಿತ್ತು. ಬೆಂಗಳೂರು ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪುರಸ್ಕಾರಕ್ಕೆ ಭಾಜನರಾಗಿದ್ದ ಅವರು, ಅನೇಕ ಸಂಘ-ಸಂಸ್ಥೆಗಳ, ಸರಕಾರದ ವಿವಿಧ ಪ್ರಶಸ್ತಿಗಳಿಂದ ವಿಭೂಷಿತರಾಗಿದ್ದರು. ಅವರ ಅಗಲುವಿಕೆ ನಮ್ಮ ನಾಡಿಗೆ ತುಂಬಲಾಗದ ನಷ್ಟವನ್ನುಂಟು ಮಾಡಿದೆ ಎಂದು ಶ್ರೀಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ದಯಾಘನನಾದ ಭಗವಂತ ಅವರ ಆತ್ಮಕ್ಕೆ ಚಿರಶಾಂತಿಯನ್ನು ದಯಪಾಲಿಸಲಿ. ಕರ್ನಾಟಕ ಸರಕಾರ ಅವರ ಹೆಸರನ್ನು ಚಿರಸ್ಥಾಯಿಗೊಳಿಸುವ ನಿಟ್ಟಿನಲ್ಲಿ ಸ್ಮಾರಕ ನಿರ್ಮಾಣ ಮಾಡಲಿ ಅಥವಾ ಯಾವುದಾದರೂ ಯೋಜನೆಯನ್ನು ಹಾಕಿಕೊಂಡು ಅನುಷ್ಠಾನಗೊಳಿಸಲಿ ಎಂದು ಶ್ರೀಗಳು ಆಶಿಸಿದ್ದಾರೆ.

### ಮತದಾನ ಜಾಗೃತಿಗಾಗಿ 'ಬೈಸಿಕಲ್ ಜಾಥಾ'ದಲ್ಲಿ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಭರತ್

## ಪ್ರಜಾಪ್ರಭುತ್ವ ಬಲಪಡಿಸಲು ಕೈ ಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ (ಸ್ವೀಪ್), ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಕಾರದಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಅಭಿಯಾನವು 'ಬೈಸಿಕಲ್ ಜಾಥಾ' ಮೂಲಕ ಮಂಗಳವಾರ ಜರುಗಿತು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಮುಂಭಾಗ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿ.ಪಂ ಸಿಇಒ ಎಸ್. ಭರತ್ ಅವರು ಬೈಸಿಕಲ್‌ನಲ್ಲಿ ಸಂಚರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಇದೇ ಮೇ 7ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ಅರ್ಹರೆಲ್ಲರೂ ತಪ್ಪದೇ ಮತ



ಚಲಾಯಿಸಿ. ಜಿಲ್ಲೆಯಲ್ಲಿ ಶೇ.100ರಷ್ಟು ಮತದಾನಕ್ಕೆ ಸಹಕರಿಸಬೇಕು. 18 ವರ್ಷ ಪೂರ್ಣಗೊಂಡ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ, ಪ್ರಜಾಪ್ರಭುತ್ವ ಬಲಪಡಿಸಲು ಕೈ ಜೋಡಿಸಬೇಕು ಎಂದು ಕೋರಿದರು.

ಕಡ್ಡಾಯವಾಗಿ ಮತದಾನ ಮಾಡಿ-ಪ್ರಜಾಪ್ರಭುತ್ವ ಬಲಪಡಿಸಿ, ನಮ್ಮ ಮತ-ನಮ್ಮ ಹಕ್ಕು, ಮತದಾರರು ಮತದಾನದಿಂದ ಹೊರಗುಳಿಯಬಾರದು, ಪ್ರತಿಶತ ಮತದಾನ ಉತ್ತಮ ಸಮಾಜ ನಿರ್ಮಿಸಿ, ಮತದಾನಕ್ಕಿಂತ ಮತ್ತೊಂದಿಲ್ಲ, ಕಡ್ಡಾಯವಾಗಿ ಮತದಾನ ಮಾಡುತ್ತೇವೆ ಎಂಬ ಘೋಷವಾಕ್ಯಗಳು ಮೊಳಗಿದವು.

ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಇದ್ದರು.

ಬೈಸಿಕಲ್ ಜಾಥಾದಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು. ಬೈಸಿಕಲ್ ಜಾಥಾವು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಪ್ರಾರಂಭಗೊಂಡು ಪಂಚಾಕ್ಷರಿ ನಗರದ ಶುದ್ಧ ಕುಡಿಯುವ ನೀರಿನ ಘಟಕ, ಚೇತನ ಕ್ಯಾಂಟೀನ್, ಹಾತಲಗೇರಿ ನಾಕಾ, ಬಳ್ಳಾರಿ ಗೇಟ್, ಕುರಹಟ್ಟಿ ಪೇಟೆ, ಟೆಂಗಿನಕಾಯಿ ಬಜಾರ, ಜರ್ಮನ್ ಆಸ್ಪತ್ರೆ, ಸಹಸ್ರಾರ್ಜುನ ವೃತ್ತ, ಮಹಾರಾಣ ಪ್ರತಾಪ ಸಿಂಹ ವೃತ್ತ, ಹಳೇ ಕೋರ್ಟ್ ವೃತ್ತ, ಗಾಂಧಿ ವೃತ್ತ, ರೋಟರಿ ವೃತ್ತ, ಭೂಮರಡ್ಡಿ ವೃತ್ತದ ಮೂಲಕ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಿತು.

### 1,76,300 ರೂ ಬೆಲೆಯ ಬಂಗಾರದ ಆಭರಣ, 10 ಸಾವಿರ ರೂ ನಗದು ವಶಕ್ಕೆ

## ಮನೆಗಳ್ಳತನ ನಡೆಸಿದ್ದ ಆರೋಪಿಯ ಬಂಧನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜನೇವರಿ ತಿಂಗಳಲ್ಲಿ ನಡೆದಿದ್ದ ಕಳ್ಳತನಕ್ಕೆ ಸಂಬಂಧಿಸಿದಂತೆ ಪೋಲೀಸರು ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಆರೋಪಿತನಿಂದ ಒಟ್ಟು 1,76,300 ರೂ ಕಿಮ್ಮತ್ತಿನ 39 ಗ್ರಾಂ ಬಂಗಾರದ ಆಭರಣಗಳನ್ನು ಹಾಗೂ ಒಟ್ಟು 10 ಸಾವಿರ ರೂ ನಗದು ಹಣವನ್ನು ವಶಪಡಿಸಿಕೊಂಡಿದ್ದಾರೆ.

ಪಟ್ಟಣದ ಲಕ್ಷ್ಮೀ ನಗರ ಹಾಗೂ ಜನ್ನತ್ ನಗರದಲ್ಲಿಯ ಮನೆಗಳಲ್ಲಿ ಯಾರೋ ಕಳ್ಳರು 14.01.2024ರಿಂದ 16.01.2024ರ ನಡುವಿನ ಅವಧಿಯಲ್ಲಿ ಕಳ್ಳತನ ಮಾಡಿದ್ದು, ಘಟನೆಗೆ ಸಂಬಂಧಿಸಿದಂತೆ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗುನ್ನಾ ನಂ: 05/2024 00: 454. 457, 380 : 04/2024:454, 457, 380 ಐಪಿಸಿ ಪ್ರಕರಣ ದಾಖಲಾಗಿತ್ತು. ಈ ಪ್ರಕರಣಕ್ಕೆ ಸಂಬಂದಿಸಿದಂತೆ ತನಿಖೆ ಕೈಗೊಂಡು ಆರೋಪಿತರ ಪತ್ತೆ ಮಾಡಲು ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕರು ಹಾಗೂ ಗದಗ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಡಿ.ಎಸ್.ಪಿ, ಸಿಪಿಐ ಶಿರಹಟ್ಟಿರವರ ಇವರ ನೇತೃತ್ವದಲ್ಲಿ ತಂಡವೊಂದನ್ನು ರಚಿಸಿ, ಪತ್ತೆ ಕಾರ್ಯ ಕೈಗೊಂಡಿದ್ದರು.

ಪ್ರಕರಣದ ಆರೋಪಿತನಾದ ರಾಣೆಬೆನ್ನೂರಿನ ಸದ್ಯ ಬಳ್ಳಾರಿ ಕಾಟೆಗುಡ್ಡ, ಎಂ.ಜಿ. ರೋಡ್ ಹತ್ತಿರದ ಪರಶುರಾಮ ರಾಮಪ್ಪ ಚಂದಳ್ಳಿ ತಳವಾರ ಇವನನ್ನು ಮಂಗಳವಾರ ಪತ್ತೆ ಮಾಡಿ ದಸ್ತಗೀರ ಮಾಡಿದ್ದಾರೆ.

ಆರೋಪಿತನ ಪತ್ತೆ ಕಾರ್ಯದಲ್ಲಿ ಯಶಸ್ವಿಯಾದ ಸಿಪಿಐ ನಾಗರಾಜ ಮಾಡಳ್ಳಿ, ಲಕ್ಷ್ಮೇಶ್ವರ ಠಾಣೆಯ ಪಿಎಸ್‌ಐ ಈರಪ್ಪ ರಿತ್ತಿ, ಕ್ರೈಮ್‌ವಿಭಾಗದ ಪಿಎಸ್‌ಐ ಚನ್ನಬಸವ ಬಬಲಿ, ಎಎಸ್‌ಐ ಎಮ್.ಎ. ಮೌಲ್ವಿ, ಸಿಬ್ಬಂದಿಗಳಾದ ಆರ್.ಎಸ್. ಯರಗಟ್ಟಿ, ಎಮ್.ಎ. ಶೇಖ್, ಎಮ್.ಎಸ್. ಬಳ್ಳಾರಿ, ಆನಂದ ಕಮ್ಮಾರ, ಸಿ.ಎಸ್. ಮಠಪತಿ, ಡಿ.ಎಸ್. ನದಾಫ್, ಗಣೇಶ ಗ್ರಾಮಪುರೋಹಿತ್, ಹೆಚ್.ಐ. ಕಲ್ಲಣ್ಣವರ, ಪಾಂಡುರಂಗರಾವ, ಮಧುಚಂದ್ರ ಧಾರವಾಡ ಇವರುಗಳ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ನರೇಗಾ ಕೂಲಿಕಾರರಿಗೆ ಮತದಾನ ಜಾಗೃತಿ-ಪ್ರತಿಜ್ಞಾವಿಧಿ ಬೋಧನೆ

## ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ತಾಲೂಕಿನ ಮಾರನಬಸರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೂದಿಹಾಳ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಲೋಕಸಭೆ ಚುನಾವಣೆ ಕುರಿತು ಕೂಲಿಕಾರರಿಗೆ ಮತದಾನ ಜಾಗೃತಿ ಮೂಡಿಸಲಾಯಿತು.

ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಬಡಿಗೇರ್ ಮಾತನಾಡಿ, ಮತದಾನ ಎಂಬುದು ಭಾರತ ಸಂವಿಧಾನ ನಮಗೆ ನೀಡಿರುವ ಹಕ್ಕು. ಪ್ರಜಾಪ್ರಭುತ್ವದ ಏಳಿಗೆಗಾಗಿ ಉತ್ತಮ ಪ್ರಜೆಯನ್ನು ಆಯ್ಕೆ ಮಾಡಿಕೊಳ್ಳುವುದಕೋಸ್ಕರ ನಾವೆಲ್ಲರೂ ನಮ್ಮ ಎಲ್ಲ ಕೆಲಸಗಳನ್ನೂ ಬದಿಗಿಟ್ಟು ಮೇ 7ರಂದು ತಪ್ಪದೇ ಮತದಾನ ಮಾಡೋಣ ಎಂದು ಕರೆ ನೀಡಿದ ಅವರು, ಭಾರತದ ಪ್ರತಿಯೊಬ್ಬ ಪ್ರಜೆಯೂ ಮತದಾನದಲ್ಲಿ ಭಾಗಿಯಾಗಿ ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಶ್ರಮಿಸೋಣ ಎಂದರು.

ಎಲ್ಲಾ ಮತದಾರರು ತಮ್ಮ ಮತಗಟ್ಟೆಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಮೇ 7ರಂದು ನಡೆಯುವ ಮತದಾನದ ದಿನ ತಪ್ಪದೇ ನಿಮ್ಮ ಹಕ್ಕು ಚಲಾಯಿಸಿ ಎಂದರಲ್ಲದೆ, ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದ ದೂರುಗಳನ್ನು ನೀಡಬೇಕು ಹಾಗೂ ಸುಲಲಿತ ಹಾಗೂ ನ್ಯಾಯಬದ್ಧ ಚುನಾವಣೆಗಾಗಿ ಚುನಾವಣಾ ಆಯೋಗ



ನೀಡಿರುವ ವೋಟರ್ ಹೆಲ್ಪ್ ಲೈನ್, ಸಕ್ಷಾಮ್ ಆ್ಯಪ್, ಸಿವಿಜಿಲ್ ಆ್ಯಪ್‌ಗಳನ್ನು ಬಳಸಿ ನೈತಿಕ ಮತದಾನಕ್ಕೆ ಸಹಕರಿಸಬೇಕು ಎಂದರು.

ಸಾರ್ವಜನಿಕರು, ಕೂಲಿಕಾರರೆಲ್ಲರೂ ಕಡ್ಡಾಯವಾಗಿ ಮೇ 7ರಂದು ಮತದಾನ ಮಾಡಬೇಕು. ಮತದಾನ ನಮಗೆ ಸಂವಿದಾನ ನೀಡಿರುವ ಒಂದು ವರ. ಹಾಗಾಗಿ ಯಾರೂ ಮತದಾನದಿಂದ ವಂಚಿತರಾಗದೇ ಶೇ. 100ರಷ್ಟು ಮತದಾನಕ್ಕೆ ಶ್ರಮೀಸೋಣ ಎಂದು ಹೇಳಿದರು. ನಂತರ ಎಲ್ಲಾ ಕೂಲಿಕಾರರಿಗೆ ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಮೇ 7ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆ ದಾಕ್ಷಿಣ್ಯಗಳಿಗೆ ಪ್ರಭಾವಿತರಾಗದೆ ವಿವೇಚನೆಯಿಂದ ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗೆಲ್ಲಿಸೋಣ. ಪ್ರಜಾಪ್ರಭುತ್ವ ಗಟ್ಟಿಗೊಳಿಸಲು ಕಡ್ಡಾಯವಾಗಿ ಮತದಾನ ಮಾಡಿ ಎಂದು ಬಸವರಾಜ ಬಡಿಗೇರ್ ಕರೆ ನೀಡಿದರು.

ಈ ಸಂದರ್ಭದಲ್ಲಿ ಪಿಡಿಒ ಎಸ್.ಬಿ. ಸಂಕನೂರು, ಎಂಐಎಸ್ ಸಂಯೋಜಕರಾದ ವಸಂತ ಅನ್ವರಿ, ಐಇಸಿ ಸಂಯೋಜಕರಾದ ಮಂಜುನಾಥ ಹಳ್ಳದ, ತಾಂತ್ರಿಕ ಸಹಾಯಕರಾದ ಪ್ರವೀಣ ದೂಳಣ್ಣನವರ, ಬಿಎಫ್‌ಟಿ ಚಂದ್ರಕಾಂತ ಲಮಾಣಿ, ಕರ ವಸೂಲಿಗಾರ ಚನ್ನಬಸಪ್ಪ ಹೂಗಾರ, ಪಂಚಾಯಿತಿ ಸಿಬ್ಬಂದಿಗಳು, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

## ಸಂಪಾದಕೀಯ

### ಪಾರದರ್ಶಕವಲ್ಲದ ಚುನಾವಣೆ ಬಾಂಡ್ ಕಪ್ಪು ಹಣಕ್ಕೆ ಸಮ

ದಶಕದ ನಂತರ ಪ್ರಧಾನಿ ನರೇಂದ್ರ ಮೋದಿ ಸುದ್ದಿಸಂಸ್ಥೆಯೊಂದಕ್ಕೆ ಸಂದರ್ಶನ ನೀಡಿದ್ದಾರೆ. ಸಂದರ್ಶನ ಕೊಟ್ಟಿದ್ದಾರೆ ಎನ್ನುವುದಕ್ಕಿಂತ ಸಂದರ್ಶನವನ್ನು ಸರಿಯಾಗಿ ಸಿದ್ಧಪಡಿಸಿಕೊಂಡಿದ್ದಾರೆ ಎಂದರೆ ಹೆಚ್ಚು ಸೂಕ್ತವಾಗುತ್ತದೆ. ಸಂದರ್ಶಕರು ಕೇಳುವ ಪ್ರಶ್ನೆಗಳನ್ನು ಗಮನಿಸಿದರೆ, ಪೂರ್ವ ಯೋಜಿತ ಸಂದರ್ಶನ ಎನ್ನುವುದು ಜನಸಾಮಾನ್ಯರಿಗೂ ಅರ್ಥವಾಗುತ್ತದೆ.

ಸಂದರ್ಶನ ಏನೇ ಇರಲಿ, ಆದರೆ ಅಲ್ಲಿ ಚುನಾವಣೆ ಬಾಂಡ್ ಕುರಿತಾಗಿ ಪ್ರಧಾನಿ ನರೇಂದ್ರ ಮೋದಿ ವ್ಯಕ್ತಪಡಿಸಿದ ಅಭಿಪ್ರಾಯಗಳು ಚರ್ಚೆಗೆ ಕಾರಣವಾಗಿದೆ. ಕಪ್ಪು ಹಣ ಪ್ರೋತ್ಸಾಹವನ್ನು ಕಡಿಮೆಗೊಳಿಸುವ ಕಾರಣಕ್ಕೆ ಚುನಾವಣೆ ಬಾಂಡ್ ವ್ಯವಸ್ಥೆ ಜಾರಿಗೆ ತರಲಾಗಿತ್ತು. ಆದರೆ ಸುಪ್ರೀಂಕೋರ್ಟ್ ಅದಕ್ಕೆ ತಡೆ ನೀಡಿದೆ. ಮುಂದೆ ಪಶ್ಚಾತಾಪ ಪಡಬೇಕಾಗುತ್ತದೆ ಎಂದಿದ್ದಾರೆ.

ಕಪ್ಪುಹಣ ತಡೆಗೆ ಚುನಾವಣೆ ಬಾಂಡ್ ವ್ಯವಸ್ಥೆ ಜಾರಿಗೊಳಿಸಿದ್ದು ಒಳ್ಳೆಯ ನಿರ್ಧಾರವೇ. ದಾನಿಗಳು ಮತ್ತು ಕಾರ್ಪೊರೇಟ್ ಸಂಸ್ಥೆಗಳು ತಮಗೆ ಇಷ್ಟವಾದ (ಅನುಕೂಲ ಕಲ್ಪಿಸಿದ) ಪಕ್ಷಗಳಿಗೆ ದೇಣಿಗೆ ಕೊಡಲು ಸಹಕಾರಿಯಾಗಿದೆ. ಕಪ್ಪು ಹಣದ ರೂಪದಲ್ಲಿ ಕೊಡುತ್ತಿದ್ದ ದೇಣಿಗೆಯನ್ನು ಅಧಿಕೃತವಾಗಿ, ಕೊಡುವಂಥ ವ್ಯವಸ್ಥೆಯನ್ನು ಚುನಾವಣೆ ಬಾಂಡ್ ಕಲ್ಪಿಸಿದೆ.

ಆದರೆ ದೇಣಿಗೆ ನೀಡಿದವರು ಮಾಹಿತಿ ಗೌಪ್ಯವಾಗಿಟ್ಟು ಬಾಂಡ್ ಸ್ವೀಕರಿಸುವುದೇಕೆ? ದೇಣಿಗೆ ನೀಡುವುದೇ ಆದರೆ ಬಹಿರಂಗವಾಗಿ, ಪಾರದರ್ಶಕವಾಗಿ ಕೊಡಲು ಸೂಚಿಸುವುದನ್ನು ಬಿಟ್ಟು, ಬಿಟ್ಟಿ ಹಣವನ್ನು ಬೇಕಾಬಿಟ್ಟಿಯಾಗಿ ಸ್ವೀಕರಿಸಿದ್ದು ಏಕೆ?

ವಿಶೇಷ ಎಂದರೆ ಹೀಗೆ ಕೋಟ್ಯಾಂತರ ರೂಪಾಯಿ ದೇಣಿಗೆ ಕೊಟ್ಟ ಸಂಸ್ಥೆಗಳು ಸಾಲದಲ್ಲಿ ಮುಳುಗಿವೆ. ಪಾಲುದಾರರಿಗೆ, ಹೂಡಿಕೆದಾರರಿಗೆ ನಯಾಪೈಸೆ ಲಾಭಾಂಶ ಕೊಡದ ಸಂಸ್ಥೆಗಳು ಕೋಟ್ಯಾಂತರ ರೂಪಾಯಿ ದೇಣಿಗೆ ಕೊಡುತ್ತವೆ? ಅದು ಕೇವಲ ಒಂದೇ ಒಂದು ಬ್ಯಾಂಕಿನಿಂದ ಅಂದರೆ ಅನುಮಾನ ಮೂಡುವುದಿಲ್ಲವೇ?

ಜನಸಾಮಾನ್ಯರ ಈ ಎಲ್ಲ ಅನುಮಾನಗಳಿಗೆ ತೆರೆ ಎಳೆಯುವ ಕೆಲಸವನ್ನು ಸುಪ್ರೀಂಕೋರ್ಟ್ ಮಾಡಿದೆ. ಪ್ರಕರಣ ಸುಪ್ರೀಂಕೋರ್ಟ್ ಮೆಟ್ಟಿಲೇರಿದ ನಂತರವೇ ಈ ಅಂಶಗಳು ಬಯಲಿಗೆ ಬಂದವು. ಇಲ್ಲದಿದ್ದರೆ ಪ್ರಸ್ತುತ ಲೋಕಸಭೆ ಚುನಾವಣೆಯಲ್ಲಿ ಹಣದ ಹೊಳೆ ಅಲ್ಲ ಸಮುದ್ರವೇ ಉಕ್ಕಿ ಹರಿಯುತ್ತಿತ್ತು. ಅದಕ್ಕೆಲ್ಲಾ ಸುಪ್ರೀಂಕೋರ್ಟ್ ಕಡಿವಾಣ ಹಾಕಿದೆ. ಇದಕ್ಕೆ ಯಾರೂ ಪಶ್ಚಾತಾಪ ಪಡಬೇಕಾಗಿಲ್ಲ. ಪಾರದರ್ಶಕವಾಗಿ ದೇಣಿಗೆ ನೀಡಿದ ಹಣ ಕಪ್ಪು ಹಣಕ್ಕೆ ಸಮ.

ಭಗವಂತನ ಕೃಪೆಯಾಗುವುದು ನಮ್ಮ ಕಾರ್ಯನಿರ್ವಹಣೆಯಿಂದಲೇ ಹೊರತು ಮೊರೆ ಇಡುವುದರಿಂದಲ್ಲ

# ಪುರುಷಾರ್ಥ–ಭಗವಂತನ ಕೃಪೆ



ಅದು ರಾಮ–ರಾವಣರ ಯುದ್ಧ ಸನ್ನಿಹಿತವಾದ ಕಾಲ. ಸ್ವರ್ಣಲಂಕೆಯನ್ನು ತಲುಪಲು ಬೇಕಾದ ಸೇತುವೆಯ ನಿರ್ಮಾಣ ಕಾರ್ಯ ಭರದಿಂದ ಸಾಗಿತ್ತು. ಎಲ್ಲಾ ಕಪಿಗಳು ಸುತ್ತಮುತ್ತಲ ಗುಡ್ಡ ಬೆಟ್ಟಗಳಿಂದ ಸಣ್ಣ ಕಲ್ಲುಗಳನ್ನು ತಂದು ಸೇತುವೆಯ ನಿರ್ಮಾಣದಲ್ಲಿ ತೊಡಗಿದ್ದವು. ಎಲ್ಲರ ಪ್ರಯತ್ನದ ಫಲವಾಗಿ ಪುಟ್ಟ ಸೇತುವೆ ನಿರ್ಮಾಣವಾಯಿತು.

ಆದರೆ ಪ್ರಭು ಶ್ರೀರಾಮನಿಗೆ ಸೇತುವೆ ಅಷ್ಟೊಂದು ಬಲಿಷ್ಠವಾಗಿಲ್ಲ ಎಂಬ ಭಾವನೆ. ಸೇತುವೆ ತುಂಬಾ ತೆಳುವಾಗಿ ನಿರ್ಮಾಣವಾಗಿದೆ ಎಲ್ಲ ಕಪಿಗಳ ಭಾರಕ್ಕೆ ಬಿದ್ದು ಹೋಗಬಹುದು ಎಂಬ ಭಯ, ಜೊತೆಗೆ ತನ್ನಿಂದ ಯಾರಿಗೂ ಹಾನಿಯಾಗಬಾರದು ಎಂಬ ಮುಂದಾಲೋಚನೆ ಕೂಡ. ಆದ್ದರಿಂದ ಎಲ್ಲರಿಗಿಂತ ಮುಂಚೆ ತಾನು ಸೇತುವೆಯ ಮೇಲೆ ನಡೆದು ಹೋಗುವ ಪ್ರಯತ್ನದ ಅಂಗವಾಗಿ ಆತ ಹೆಜ್ಜೆ ಇಟ್ಟನು. ಪ್ರಭು ಶ್ರೀ ರಾಮ ಸೇತುವೆಯ ಮೇಲೆ ಕಾಲಿಟ್ಟೊಡನೆ ಸಮುದ್ರದಲ್ಲಿದ್ದ ಎಲ್ಲಾ ಜಲಚರಗಳು ಬಂದು ಸೇತುವೆಯನ್ನು ಗಟ್ಟಿಯಾಗಿ ಒತ್ತಿ ಹಿಡಿದವು. ಎಲ್ಲ ಜಲಚರಗಳ ಪ್ರಯತ್ನದ ಫಲವಾಗಿ ಸೇತುವೆ ಅತ್ಯಂತ ಬಲಿಷ್ಠವಾಯಿತು. ಸೇತುವೆಯ ಮೇಲೆ ನಡೆದಾಡಿದ ಶ್ರೀರಾಮ ತೃಪ್ತನಾಗಿ ಹಿಂದಿರುಗಿ ಬಂದು ಸಮುದ್ರದ ದಡದಲ್ಲಿರುವ ಕಲ್ಲೊಂದರ ಮೇಲೆ ಕುಳಿತ.

ಇದನ್ನೆಲ್ಲ ಗಮನಿಸುತ್ತಿದ್ದ ಜಾಂಬವಂತ ಕರಡಿ ಶ್ರೀರಾಮನ ಬಳಿ ಬಂದು 'ಪ್ರಭು, ಎಲ್ಲವೂ ನಿನ್ನ ಕೃಪೆಯಿಂದಲೇ ಆಗುತ್ತದೆ ಎಂಬುದು ಇಂದು ಸಾಬೀತಾಯಿತು. ಆದರೆ ನನ್ನದೊಂದು ಸಂದೇಹ' ಎಂದು ಅರಿಕೆ ಮಾಡಿಕೊಂಡನು. ನಸುನಕ್ಕ ಪ್ರಭು ಶ್ರೀ ರಾಮ 'ಹೇಳು ಜಾಂಬವಂತ, ಏನು ನಿನ್ನ ಸಂದೇಹ? ಎಂದು ಕೇಳಲು ಜಾಂಬವಂತನು 'ಪ್ರಭು, ನಿನ್ನ ಕೃಪಾ ಕಟಾಕ್ಷದಿಂದಲೇ ಸೇತುವೆ ಬಲವಾಯಿತು ಎಂಬುದಾದರೆ ಇಷ್ಟೆಲ್ಲಾ ಶ್ರಮಪಟ್ಟು ಕಪಿಗಳಿಂದ ಸೇತುವೆಯನ್ನು ನಿರ್ಮಿಸುವ ಸಾಹಸ ಏಕೆ' ಎಂದು ಪ್ರಶ್ನಿಸಿದ.

ಪ್ರಭು ಶ್ರೀರಾಮನು ಜಾಂಬವಂತನನ್ನು ಉದ್ದೇಶಿಸಿ ಹೇಳಿದ, 'ಜಾಂಬವಂತ, ನಿನ್ನ ಸಂದೇಹ ನನಗೆ ಅರ್ಥವಾಯಿತು. ಎಲ್ಲವನ್ನೂ ನಾನೇ ಮಾಡಲು ಸಾಧ್ಯವಿರುವಾಗ ಸೇತುವೆ ನಿರ್ಮಾಣ ಮಾಡಲು ಕಪಿಗಳನ್ನು ಏಕೆ ತೊಡಗಿಸಿದೆ ಎಂದಲ್ಲವೇ? ಎಲ್ಲ ಕಪಿಗಳು ಮಾಡಿದ್ದು ತಮ್ಮ ಪುರುಷಾರ್ಥವನ್ನು ಅಂದರೆ ತಮ್ಮ ಕಾರ್ಯವನ್ನು. ಪುರುಷಾರ್ಥ ಎನ್ನುವುದು ಒಂದು ಹಂತದವರೆಗೆ ಮಾತ್ರ ಸಾಧ್ಯವಾಗುತ್ತದೆ. ಅದಕ್ಕೆ ನನ್ನ ಕೊಡುಗೆ ಕೇವಲ ಕೃಪೆ. ಕೃಪೆ ಸೀಮಾತೀತವಾದದ್ದು. ಪುರುಷಾರ್ಥದೊಂದಿಗೆ ಕೃಪೆಯು ಬೆರೆತಾಗ ಸಾರ್ಥಕ ಕಾರ್ಯವಾಗುತ್ತದೆ. ಅಂತೆಯೇ ಇಂದು ಕಪಿಗಳ ಪುರುಷಾರ್ಥಕ್ಕೆ ನನ್ನ ಕೃಪೆಯೂ ಸೇರಿ ಈ ಸೇತುವೆ ನಿರ್ಮಾಣವಾಗಿದೆ' ಎಂದು ಹೇಳಿದನು.

ಅದೆಷ್ಟು ಸುಂದರವಾದ ಮಾತಲ್ಲವೇ ಸ್ನೇಹಿತರೆ? ಎಲ್ಲವೂ ದೇವರ ಕೃಪೆ, ಎಲ್ಲವನ್ನು ದೇವರೇ ಮಾಡುತ್ತಾನೆ ಎಂದು ಹೇಳಿ ನಾವು ಸುಮ್ಮನೆ ಕುಳಿತುಕೊಂಡರೆ ಕಾರ್ಯಸಿದ್ಧಿ ಆಗದು. ದೇವರು ಹೇಗಾದ್ರೂ ಪಾಸ್ ಮಾಡುತ್ತಾನೆ ಎಂದು ಪರೀಕ್ಷೆಗೆ ಓದದಿದ್ದರೆ ಪಾಸಾಗಲು ಸಾಧ್ಯವೇ?

ಇದಕ್ಕೆ ಪೂರಕವಾಗಿ ಇನ್ನೊಂದು ಕಥೆ ನೆನಪಿಗೆ ಬರುತ್ತದೆ. ದೇವರ ಮೇಲೆ ಅಪಾರ ಭಕ್ತಿಯುಳ್ಳ ಓರ್ವ ವ್ಯಕ್ತಿ ತನ್ನ ಊರಿಗೆ ನೆರೆ ಬಂದಾಗ ದೇವರನ್ನು ಕಾಪಾಡು ಎಂದು ಬೇಡಿಕೊಂಡನು. ದೇವರೇ ಬಂದು ತನ್ನನ್ನು ಕಾಪಾಡುತ್ತಾನೆ ಎಂಬ ನಂಬಿಕೆ ಆತನದ್ದು. ಊರಿನವರೆಲ್ಲ ಆತನನ್ನು ದೋಣಿಯಲ್ಲಿ ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯಲು ಪ್ರಯತ್ನಿಸಿದರಾದರೂ ಆತ ಒಪ್ಪಲಿಲ್ಲ. ಆತನನ್ನು ಬಿಟ್ಟು ಅವರು ಹೊರಟು ಹೋದರು. ಕೆಲ ಸಮಯದ ನಂತರ ಮತ್ತೊಂದು ದೋಣಿಯಲ್ಲಿರುವ ಜನರು ಕೂಡ ಆತನನ್ನು ಬೇಗ ಬರುವಂತೆ ಕರೆದರೂ ಕೂಡ ಆತ 'ಇಲ್ಲ, ದೇವರೇ ಬಂದು ನನ್ನನ್ನು ರಕ್ಷಿಸುತ್ತಾನೆ' ಎಂದು ಹೇಳಿದ. ಅವರು ಕೂಡ ಆತನನ್ನು ಬಿಟ್ಟು ಹೊರಟು ಹೋದರು. ನೀರಿನ ಪ್ರವಾಹ ಏರುತ್ತಲೇ ಹೋಯಿತು ಮತ್ತೂ ಕೆಲ ಗಂಟೆಗಳ ನಂತರ ದೊಡ್ಡ ಮರದ ದಿಮ್ಮಿಯೊಂದು ಆತ ಕುಳಿತ ಕಟ್ಟಡದ ಬಳಿ ತೇಲುತ್ತಾ ಬಂದಿತ್ತು. ಅದರ ಮೇಲೆ ಆತ ಕುಳಿತರೆ ಇಲ್ಲವೇ ಅದನ್ನು ಹಿಡಿದುಕೊಂಡರೆ ಆತ ಮುಳುಗದೆ ಸುರಕ್ಷಿತ ದಡಕ್ಕೆ ಹೋಗಿ ಸೇರುವ ಸಾಧ್ಯತೆ ಇತ್ತು. ಆದರೂ ಕೂಡ ದೇವರು ಬರುತ್ತಾನೆ ಎಂಬ ನಿರೀಕ್ಷೆಯಲ್ಲಿ ಆತ ಹೋಗಲೇ ಇಲ್ಲ. ಅಂತಿಮವಾಗಿ ನೆರೆಯ ಪ್ರವಾಹದಲ್ಲಿ ಕೊಚ್ಚಿ ಹೋದ ಆತ ಮರಣ ಹೊಂದಿದ.

ಮರಣದ ನಂತರ ಆತನ ಆತ್ಮ ದೇವಲೋಕಕ್ಕೆ ಬಂದಾಗ ಅಲ್ಲಿ ತನ್ನ ಇಷ್ಟದೈವವನ್ನು ಕಂಡ ಆ ವ್ಯಕ್ತಿ 'ಇದೇನು ದೇವ, ನಾನು ನಿನ್ನನ್ನು ನಂಬಿದರೆ ನೀನು ನನ್ನ ಕೈ ಹಿಡಿದು ಕಾಪಾಡಲಿಲ್ಲ!? ಎಂದು ದೂರಿದ. ಆಗ ದೇವರು ನಸುನಗುತ್ತಾ 'ಮಗು, ನಾನು ನಿನ್ನನ್ನು ಕಾಪಾಡಲೆಂದೇ ಎರಡು ಬಾರಿ ದೋಣಿಯಲ್ಲಿ ಜನರನ್ನು ಕಳುಹಿಸಿದೆ, ಮೂರನೇ ಬಾರಿ ಮರದ ದಿಮ್ಮಿಯ ರೂಪದಲ್ಲಿ ನಿನ್ನ ಬಳಿ ಬಂದೆ ಆದರೆ ನೀನು ಬರಲಿಲ್ಲ. ನಿನ್ನ ಸ್ವ ಪ್ರಯತ್ನ ಇಲ್ಲದೆ ಹೋದರೆ ನಾನೇನು ಮಾಡಿದರೂ ಅದು ವಿಫಲವೇ ಆಗುತ್ತದೆ ಎಂಬುದು ನಿನಗೆ ಅರಿವಾಗಲೇ ಇಲ್ಲ' ಎಂದು ಹೇಳಿದನು. ಇದೀಗ ಆ ವ್ಯಕ್ತಿಗೆ ತನ್ನ ತಪ್ಪಿನ ಅರಿವಾಯಿತು.

ಸ್ನೇಹಿತರೆ, ಇಲ್ಲಿ ನಾವು ಅರಿತುಕೊಳ್ಳಬೇಕಾಗಿರುವುದು ಎರಡು ವಿಷಯಗಳನ್ನು. ಒಂದು, ಸ್ವ ಪ್ರಯತ್ನದಿಂದ ಪುರುಷಾರ್ಥ ಸಾಧನೆ. ಎರಡನೆಯದಾಗಿ, ಭಗವಂತನ ಕೃಪೆ ನಮ್ಮ ಮೇಲಾಗುವುದು ನಮ್ಮ ಕಾರ್ಯನಿರ್ವಹಣೆಯ ಬಲದಿಂದಲೇ ಹೊರತು ಕೇವಲ ಮೊರೆ ಇಡುವುದರಿಂದ ಅಲ್ಲ ಎಂದು. ದೇವರು ಕೂಡ ನಮ್ಮ ಮೊರೆಯನ್ನು ಆಲಿಸುವುದು ನಾವು ಆತನನ್ನು ನಂಬುವುದರ ಜೊತೆ ಜೊತೆಗೆ ಶ್ರದ್ಧೆಯಿಂದ ಕಾರ್ಯ ತತ್ಪರರಾದಾಗ ಮಾತ್ರ ಎಂಬುದನ್ನು ಅರಿತು ಬದುಕಿನಲ್ಲಿ ಉತ್ತಮ ಕಾರ್ಯಗಳನ್ನು ಮಾಡುತ್ತಾ ಹೋಗೋಣ.

**– ವೀಣಾ ಹೇಮಂತ್ ಗೌಡ ಪಾಟೀಲ್.**
ಮುಂಡರಗಿ.

## ಸರಕಾರಿ ಪ.ಪೂ ವಿದ್ಯಾರ್ಥಿಗಳ ಗಮನಾರ್ಹ ಸಾಧನೆ


■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರಕಾರಿ ಪ.ಪೂ ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಶೇಷ ಸಾಧನೆ ಮಾಡಿದ್ದಾರೆ. ಕಲಾ ವಿಭಾಗದಲ್ಲಿ ಗದಗ ಜಿಲ್ಲೆಗೆ ಪವಿತ್ರಾ ಹೊಸಳ್ಳಿ (588) ಪ್ರಥಮ, ಪ್ರೇಮಾ ಕವಲೂರ (586) ದ್ವಿತೀಯ ಮತ್ತು ಶಬೀನಾ ಬಳ್ಳಾರಿ (585) ತೃತೀಯ ರ್ಯಾಂಕ್‌ನೊಂದಿಗೆ ಜಿಲ್ಲಾ ಮಟ್ಟದ ಪ್ರಥಮ ಮೂರೂ ರ್ಯಾಂಕ್‌ಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಮೆಹಕ್ ಮುಜಾವರ (571), ಸಹನಾ ಲಕ್ಕುಂಡಿಮಠ (568) ಮತ್ತು ಕಾವೇರಿ ಹಡಪದ (566) ಕಾಲೇಜು ಹಂತದಲ್ಲಿ ಕ್ರಮವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ರ್ಯಾಂಕ್ ಪಡೆದಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಆಯೇಷಾ ಬೇಗಂ ಮುಳಗುಂದ (579) ಮತ್ತು ಕಿರಣಗೌಡ ನಡಮನಿ (579) ಪ್ರಥಮ, ಬಸವರಾಜ ಬಾರಕೇರ (578) ಮತ್ತು ವಿನಯ ಖನ್ನೂರ (578) ದ್ವಿತೀಯ ಹಾಗೂ ಮುಸ್ಕಾನ್ ತಹಸೀಲದಾರ (576) ತೃತೀಯ ರ್ಯಾಂಕ್ ಪಡೆದಿದ್ದಾರೆ.

ಕಾಲೇಜಿನ ಒಟ್ಟು ಫಲಿತಾಂಶ ಶೇ. 99 ಆಗಿದ್ದು, ಕಲಾ ಶೇ. 97.7, ವಾಣಿಜ್ಯ ಶೇ. 100 ಮತ್ತು ವಿಜ್ಞಾನ ಶೇ. 98.9 ಫಲಿತಾಂಶ ದಾಖಲಾಗಿದೆ. ಪರೀಕ್ಷೆಗೆ ಹಾಜರಾದ 387 ವಿದ್ಯಾರ್ಥಿಗಳಲ್ಲಿ 383 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು 161 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ ತೇರ್ಗಡೆಯಾಗಿದ್ದಾರೆ. ವಿಶಿಷ್ಟ ಸಾಧನೆಗೈದ ವಿದ್ಯಾರ್ಥಿಗಳನ್ನು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸರ್ವ ಸದಸ್ಯರು, ಪ್ರಾಚಾರ್ಯೆ ಪೂರ್ಣಿಮಾ ಹೊಸಮನಿ ಮತ್ತು ಉಪನ್ಯಾಸಕ ವೃಂದದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

## ನಾಟಕ ಕಲೆಯನ್ನು ಉಳಿಸಬೇಕಿದೆ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿ ಹಳೆ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಕೆರೂರಿನ ಶ್ರೀ ದಯಾನಂದ ಪುರಿ ನಾಟ್ಯ ಮಂಡಳಿ ಇವರು 'ಶ್ರೀ ದೇವಲ ಮಹರ್ಷಿ' ಪೌರಾಣಿಕ ನಾಟಕ ಪ್ರದರ್ಶಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ದಶರಥರಾಜ ಕೊಳ್ಳಿ ಮಾತನಾಡಿ, ಇತ್ತೀಚಿನ ದಿನಮಾನಗಳಲ್ಲಿ ನಾಟಕಗಳು ಕಣ್ಮರೆಯಾಗುತ್ತಿವೆ. ಕಲಾವಿದರ ಬದುಕು ದುಸ್ತರವಾಗುತ್ತಿದೆ. ಇಂತಹ ಸಂದರ್ಭದಲ್ಲಿ ಹವ್ಯಾಸಿ ಕಲಾವಿದರು ನಾಟಕದ ಉಳಿವಿಗಾಗಿ ಶ್ರಮಿಸುತ್ತಿದ್ದಾರೆ. ಈ ದಿಶೆಯಲ್ಲಿ ಉತ್ತರ ಕರ್ನಾಟಕದ ನೇಕಾರರ ಕೊಡುಗೆ ಹೆಚ್ಚಾಗಿದೆ. ಬೆಟಗೇರಿ, ಸೂಳೇಬಾವಿ, ಕೆರೂರು ಗುಳೇದಗುಡ್ಡ ಹೀಗೆ ನೇಕಾರರು ವಾಸಿಸುವ ಭಾಗಗಳಲ್ಲಿ ಜಾತ್ರೆ ಬಂತು ಅಂದರೆ ಅಲ್ಲಿ ನಾಟಕದ ಪ್ರಯೋಗ ಆಗುತ್ತದೆ. ಆ ಭಾಗಗಳಲ್ಲಿ ನಾಟಕವನ್ನು ನೋಡುವ ಪ್ರೇಕ್ಷಕರು ಇರುವುದು ಸಂತೋಷದ ಸಂಗತಿ ಎಂದರು.

ಕೆರೂರಿನಿಂದ ಆಗಮಿಸಿದ್ದ ನಾಟ್ಯ ಮಂಡಳಿಯ ಎಲ್ಲಾ ಕಲಾವಿದರನ್ನು ಅನಿಲ ಗಡ್ಡಿ ಗುಗ್ಗರಿ ಮುಂತಾದವರು ಗೌರವಿಸಿದರು.

## ವಚನ ಸಾಹಿತ್ಯಗಳು ಸಮಾಜವನ್ನು ತಿದ್ದುತ್ತಿವೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯ ಸಮಾಜದಲ್ಲಿ ಭಾವೈಕ್ಯತೆ, ಸಮಾನತೆ ಸಾರುವುದರೊಂದಿಗೆ ಬದುಕಿನ ರೀತಿ ತಿಳಿಸುತ್ತವೆ. ವಚನಗಳು ಸಮಾಜಕ್ಕೆ ಹತ್ತಿರವಾಗಬೇಕು. ವಚನಗಳು ಮುಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಬೇಕು ಎಂದು ನೀಲಕಂಠ ಸ್ವಾಮಿಗಳು ಹೇಳಿದರು.

ದೇವರ ದಾಸಿಮಯ್ಯನವರ ಜಯಂತಿ ಅಂಗವಾಗಿ ಬೆಟಗೇರಿ ಹಳೆ ಬನಶಂಕರಿ ದೇವಸ್ಥಾನದ ಆವರಣದಲ್ಲಿ ನಡೆದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ರಾಘವೇಂದ್ರ ಯಳವತ್ತಿ ಮಾತನಾಡಿ, ವಚನಗಳು ಜನರಿಗೆ ಅರ್ಥವಾಗುವ ರೀತಿಯಲ್ಲಿ ರಚನೆಯಾಗಿದ್ದರಿಂದ ಜನಪ್ರಿಯವಾಗಲು ಕಾರಣವಾಗಿದೆ. ವಿದ್ಯಾರ್ಥಿಗಳಲ್ಲಿ ಇಂತಹ ವಚನ ಸಾಹಿತ್ಯವನ್ನು ಬೆಳೆಸಬೇಕಾಗಿದ್ದು ನಮ್ಮೆಲ್ಲರ ಜವಾಬ್ದಾರಿ ಎಂದರು.

ದಶರಥರಾಜ ಕೊಳ್ಳಿ, ಅಶೋಕ್ ಬಣ್ಣದ ಮಾತನಾಡಿದರು. ನವೀನ ಮೇಡಿ ಸ್ವಾಗತಿಸಿದರು. ರಕ್ಷಿತಾ ಗಿಡ್ನಂದಿ ನಿರೂಪಿಸಿದರು. ಈ ಸಂದರ್ಭದಲ್ಲಿ ಪ್ರಭಾಕರ ಶಲ್ಲೇದ, ಕಿಟ್ಟಪ್ಪ ಗುಬ್ಬಿ, ನಾಗರಾಜ ಭೂತ, ಸುಭಾಷ ಗುಗ್ಗರಿ, ವಸಂತ ಇಂಜಿನಿ, ಪ್ರಕಾಶ ಗುಗ್ಗರಿ, ಬಸವರಾಜ ಗಂಜಿ, ಸುಭಾಸ ಗಂಜಿ, ಈರಣ್ಣ ಹುಳ್ಳಿ, ಲಕ್ಷ್ಮಣ ನೀಲಗುಂದ, ನವೀನ್ ಮೇಡಿ, ಪಾಂಡು ಹತ್ತಲಗೇರಿ, ನಾರಾಯಣಪ್ಪ ಕಂಗೂರಿ, ವೀಣಾ ನಿಲಗುಂದ, ಗೀತಾ ದೇವಾಂಗಮಠ, ಭಾಗ್ಯ ಆರಿ, ಮಾರುತಿ ಸೂರಿ, ಪ್ರೇಮಾ ನಂದರಗಿ, ಭಾರತಿ ಗಡ್ಡಿ, ಶಾಂತ ಗುತ್ತಿ, ಸುಧಾ ಕಂಗೂರಿ, ರತ್ನ ಪುರಂದರ, ಯಶೋಧಬಾಯಿ ಗಿಡ್ನಂದಿ, ಪ್ರಕಾಶ ಹತ್ತಿಕಾಳ, ಸಂಕಪ್ಪ ಸೊರಟೂರ, ಸತೀಶ್ ಹೊನ್ನಳ್ಳಿ, ವಿನಾಯಕ ಹೊನ್ನಳ್ಳಿ, ಕಾರ್ತಿಕ ಕೊಳ್ಳಿ, ಸಂದೀಪ ಹೊನ್ನಳ್ಳಿ, ಅರವಿಂದ ಹೊನ್ನಳ್ಳಿ, ಪ್ರಕಾಶ ಹರ್ತಿ ಸೇರಿದಂತೆ ನೇಕಾರ ಬಾಂಧವರು, ದೇವಾಂಗ ಸಮಾಜದ ಗುರು–ಹಿರಿಯರು ಉಪಸ್ಥಿತರಿದ್ದರು.

## ಗ್ಯಾರಂಟಿ ಯೋಜನೆಗಳು ಎಲ್ಲರಿಗೂ ಅನ್ವಯಿಸುತ್ತವೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಪಕ್ಷ ಬಡವರಿಗಾಗಿ ನೀಡಿದ ಗ್ಯಾರಂಟಿ ಯೋಜನೆಗಳನ್ನು ಬಿಟ್ಟಿ ಭಾಗ್ಯಗಳು ಎಂದು ಟೀಕೆ ಮಾಡಿ, ಬಡವರನ್ನು ಹೀಯಾಳಿಸುವ ಕಾರ್ಯವನ್ನು ಬಿಜೆಪಿ ಮಾಡುತ್ತಿದೆ ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಗುರುನಾಥ ದಾನಪ್ಪನವರ ಆರೋಪಿಸಿದರು.

ಅವರು ಎಪಿಎಮ್‌ಸಿ ಯಾರ್ಡ್‌ನಲ್ಲಿ ಕೂಲಿಕಾರ್ಮಿಕರು ಮತ್ತು ಹಮಾಲರ ಸಂಘದ ಸದಸ್ಯರನ್ನು ಉದ್ದೇಶಿಸಿ ಹಾವೇರಿ ಗದಗ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರ ಪರವಾಗಿ ಪ್ರಚಾರ ಕೈಗೊಂಡು ಮಾತನಾಡಿದರು.

ಗ್ಯಾರಂಟಿ ಯೋಜನೆಗಳು ಎಲ್ಲ ಜಾತಿ, ಧರ್ಮ, ಪಕ್ಷದವರಿಗೂ ಅನ್ವಯಿಸುತ್ತವೆ. ಗ್ಯಾರಂಟಿ ಯೋಜನೆಗಳನ್ನು ಟೀಕಿಸುವ ಮೊದಲು ಬಡವರಿಗೆ, ನೊಂದವರಿಗೆ ಬಿಜೆಪಿ ಕೊಡುಗೆ ಏನು ಎಂದು ಪ್ರಶ್ನಿಸಿದ ಅವರು, ಶ್ರಮಿಕರ, ಕಾರ್ಮಿಕರ ಪರವಾಗಿ ಕಾಂಗ್ರೆಸ್ ಪಕ್ಷ ಸದಾ ಇರುತ್ತದೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷ ವಿರೂಪಾಕ್ಷಪ್ಪ ಪಡಗೇರಿ ಮಾತನಾಡಿ, ಕಾಂಗ್ರೆಸ್ ಜನಪರ ಯೋಜನೆಗಳನ್ನು ಮನೆ ಮನೆಗೂ ಹೇಳಿ ಕಾಂಗ್ರೆಸ್ ಸಾಧನೆಯನ್ನು ತಿಳಿಸುವ ಕೆಲಸ ಕಾರ್ಯಕರ್ತರಿಂದ ಆಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ರಾಜಣ್ಣ ಹೊಳಲಾಪುರ, ನೀಲಪ್ಪ ಪೂಜಾರ, ಶರಣು ಗೋಡಿ, ಕಿರಣ ನವಲೆ, ಎಪಿಎಮ್‌ಸಿ ಹಮಾಲರ ಸಂಘದ ಅಧ್ಯಕ್ಷ ಮುದಕಣ್ಣ ಗದ್ದಿ, ಸಂತೋಷ ಚಕ್ರಸಾಲಿ, ಲೆಂಕೆಪ್ಪ ಶೆರಸೂರಿ, ಮಲ್ಲಪ್ಪ ಗದ್ದಿ, ನೀಲಪ್ಪ ಶೆರಸೂರಿ, ನಿಂಗಪ್ಪ ಶೆರಸೂರಿ ಸೇರಿದಂತೆ ಕಾರ್ಮಿಕ ಮುಖಂಡರು, ಕೂಲಿ ಕಾರ್ಮಿಕರ ಇದ್ದರು.

## ಸಾಧನೆಗೆ ಅಡ್ಡಿಯಾಗದ ಬಡತನ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ






ಇಲ್ಲಿಯ ರೈತ ವೀರಯ್ಯ ಗಂಧದ ಅವರ ಪುತ್ರ ಪ್ರಸಾದ ಗಂಧದ ಪಿಯುಸಿ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ 570(ಶೇ.95) ಅಂಕ ಪಡೆದು ಅಗ್ರ ಶ್ರೇಣಿಯಲ್ಲಿ ಉತ್ತೀರ್ಣನಾಗಿದ್ದಾನೆ. ವಿಶೇಷವಾಗಿ ಜೀವಶಾಸ್ತ್ರ ವಿಷಯದಲ್ಲಿ ಶೇ.100 ಅಂಕ ಪಡೆದಿದ್ದಾನೆ. ಈತ ಹುಬ್ಬಳ್ಳಿಯ ಕೋಟಗೊಂಡ ಹುಣಶಿ ಗ್ರಾಮದ ಕೆಎಲ್‌ಇ ಪ್ರೇರಣಾ ವಸತಿ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿಯಾಗಿದ್ದಾನೆ.

ಇನ್ನೋರ್ವ ವಿದ್ಯಾರ್ಥಿನಿ, ಬಡ ಕಿರಾಣಿ ವ್ಯಾಪಾರಿಯ ಪುತ್ರಿ ನಫೀಸಾ ಮಹ್ಮದರಫೀಕ ಯರಗುಡಿ ಪಿಯುಸಿ ದ್ವಿತೀಯ ಕಲಾ ವಿಭಾಗದಲ್ಲಿ 540 ಅಂಕ ಗಳಿಸಿ (ಶೇ.90) ಅಗ್ರ ಶ್ರೇಣಿಯಲ್ಲಿ ಪಾಸಾಗಿದ್ದಾಳೆ. ಈಕೆ ಗದಗ ಆಂಗ್ಲೋ ಉರ್ದು ಸಂಯುಕ್ತ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಯಾಗಿದ್ದಾಳೆ.

## ಪಿಯುಸಿ ಪರೀಕ್ಷೆಯಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಹುಲಕೋಟಿ ರೂರಲ್ ಇಂಜಿನಿಯರಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಸತೀಶ ಜ್ಯಾನೋಪಂತರರ ಪುತ್ರ, ಶ್ರೀ ಸತ್ಯಸಾಯಿ ಲೋಕಸೇವಾ ಪ.ಪೂ ಕಾಲೇಜು ಅಳಿಕೆಯ ವಿದ್ಯಾರ್ಥಿ ಪ್ರಜ್ವಲ ಜ್ಯಾನೋಪಂತರ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಪ್ರತಿಶತ ಶೇ.97 ಅಂಕ ಗಳಿಸಿ ಉತ್ತೀರ್ಣನಾಗಿದ್ದು, ಭೌತಶಾಸ್ತ್ರ ವಿಷಯದಲ್ಲಿ 100ಕ್ಕೆ 100 ಅಂಕ ಗಳಿಸಿದ 400 ವಿದ್ಯಾರ್ಥಿಗಳಲ್ಲಿ ಒಬ್ಬರಾಗಿದ್ದಾರೆ.

ಪ್ರಜ್ವಲ ತನ್ನ ಈ ಸಾಧನೆಗೆ ತಾಯಿ ಸುನಂದಾ ಜ್ಯಾನೋಪಂತರ, ಯೋಗ/ಸಂಗೀತ ಶಿಕ್ಷಕಿಯರು, ಗುರುಬಸವ ಸಿಬಿಎಸ್‌ಇ ಶಾಲೆಯವರ ಪ್ರೇರಣೆ ಮತ್ತು ಕಲಿಸಿದ ಶಿಕ್ಷಕ ವೃಂದದವರ ಕೃಪೆ ಎಂದು ಹೆಮ್ಮೆಯಿಂದ ಹೇಳಿದ್ದಾನೆ. ಈತನಿಗೆ ಬಂಧು–ಬಳಗದವರು, ಯೋಗ ಚಿಂತನ ಕೂಟದ ಸದಸ್ಯರು, ಆಪ್ತರು ಅಭಿನಂದನೆ ತಿಳಿಸಿದ್ದಾರೆ.

## ದಲಿತ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಜಯಂತ್ಯುತ್ಸವದ ಅಂಗವಾಗಿ ಸಮಿತಿಯ ಜಿಲ್ಲಾಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ನೇತೃತ್ವದಲ್ಲಿ ಡಾ. ಅಂಬೇಡ್ಕರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಮಾದಿಗ ಸಮಾಜದ ಯುವ ನಾಯಕರಾದ ಗಣೇಶ ಹುಬ್ಬಳ್ಳಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರವರು ದಲಿತ ಸಮುದಾಯದವರ ಜೀವನದಲ್ಲಿ ಸಂವಿಧಾನದ ಮೂಲಕ ಬೆಳಕನ್ನು ನೀಡಿದವರು ಎಂದರು.

ಮುಖಂಡರಾದ ಮೈಲಾರಪ್ಪ ಚಳ್ಳಮರದ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ವಿಜಯ ಮಲ್ಲೇಶ ಕಲ್ಮನಿ, ಮುದಕಮ್ಮ ಕಟ್ಟಿಮನಿ, ಪದ್ಮಿನಿ ಮುತ್ತಲದಿನ್ನಿ, ಮುತ್ತವ್ವ ಬಿನ್ನಾಳ, ಪಕ್ಕವ್ವ ಕಟ್ಟಿಮನಿ, ಲಕ್ಷ್ಮವ್ವ ಸನಾದಿ, ಚಂದಕ್ಕ ಕೋಟ್ನಿಕಲ್, ಹನಮವ್ವ ಸೀತಿಮನಿ, ಸಿದ್ದವ್ವ ಹುನಗುಂದ, ರೇಣವ್ವ ತಿಮ್ಮಾಪೂರ, ಲಕ್ಷ್ಮವ್ವ ತಿಮ್ಮಾಪೂರ, ಬಾಬು ಬಳ್ಳಾರಿ, ವಿರುಪಾಕ್ಷಿ ಗೌಡರ, ದೀಪಕ ಕಲ್ಮನಿ, ಪರಶುರಾಮ ಸಂಗಾಪೂರ, ಮಾರುತಿ ಕಟ್ಟಿಮನಿ, ಮಂಜುನಾಥ ತೌಜಲ್, ಕೇಶವ ಕೋಟ್ನಿಕಲ, ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಕೊಲ್ಲೂರು, ಮರಿಯಪ್ಪ ಪರಾಪೂರ, ಕೃಷ್ಣಾ ಸಂಗಾಪೂರ, ರೇಣುಕಾ ಕಟ್ಟಿಮನಿ, ಯಲ್ಲಮ್ಮ ಹುಬ್ಬಳ್ಳಿ, ರೇಣುಕಾ ಪರಾಪೂರ, ಸುಮಂಗಲಾ ಕಲ್ಮನಿ, ದಂಡಕ್ಕ ಮಾನ್ವಿ, ಭುವನೇಶ್ವರಿ ಜಕ್ಕಲಿ, ಮಂಜುಳಾ ಪೂಜಾರ, ಸುನೀತಾ ಕಟ್ಟಿಮನಿ, ಸುಮಂಗಲಾ ಪೂಜಾರ, ಅಶ್ವಿನಿ ಪರಾಪೂರ, ನಂದಿನಿ ಪರಾಪೂರ, ವಿಜಯಲಕ್ಷ್ಮೀ ಪರಾಪೂರ, ದುರ್ಗಾಶ್ರೀ ಪರಾಪೂರ, ಓಜಸ್ ಕೋಟ್ನಿಕಲ್ ಮುಂತಾದವರಿದ್ದರು.

## ಸ್ವಾಭಿಮಾನಿ ಕರವೇ ಮಹಿಳಾ ಉಪಾಧ್ಯಕ್ಷರ ನೇಮಕ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಉತ್ತರ ಕರ್ನಾಟಕ ಅಧ್ಯಕ್ಷ ಹಾಗೂ ಗದಗ ಜಿಲ್ಲಾ ಅಧ್ಯಕ್ಷ ಎಂ.ಎ. ಕುರ್ತಕೋಟಿ ಹಾಗೂ ರೋಣ ತಾಲೂಕಾಧ್ಯಕ್ಷ ಎಮ್.ಎಚ್. ನದಾಫ ಅವರ ನೇತೃತ್ವದಲ್ಲಿ ರೋಣ ತಾಲೂಕು ಮಹಿಳಾ ಉಪಾಧ್ಯಕ್ಷರನ್ನಾಗಿ ರೇಣುಕಾ ಯಲ್ಲಪ್ಪಗೌಡ, ಶಿವಳ್ಳಿ ಅವರನ್ನು ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ ರೋಣ ತಾಲೂಕು ಮಹಿಳಾ ಅಧ್ಯಕ್ಷೆ ಸುವರ್ಣ ಆರ್.ತೋಟಗೇರ, ಗೀತಾ ಕೆಂಚನಗೌಡರ, ಯಮನೂರು ನದಾಫ, ಮಹಮ್ಮದ್ ಹುಸೇನ, ನಂದೀಶ್ ತೋಟಗೇರ್, ಪ್ರವೀಣ್ ತರುಗಲ್ ಮುಂತಾದವರು ಉಪಸ್ಥಿತರಿದ್ದರು.

## ಶ್ರೀ ದತ್ತ ಭಕ್ತ ಮಂಡಳಿ ಪದಾಧಿಕಾರಿಗಳ ಆಯ್ಕೆ






■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ದತ್ತ ಭಕ್ತ ಮಂಡಳಿಗೆ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಯು ದತ್ತಾತ್ರೇಯ ದೇವಸ್ಥಾನದಲ್ಲಿ ಜರುಗಿತು. ಸಭೆಯಲ್ಲಿ ಡಾ. ನಾಗರಾಜ ಗ್ರಾಮಪುರೋಹಿತ ನೂತನ ಅಧ್ಯಕ್ಷರಾಗಿ ಆಯ್ಕೆಯಾದರು.

ಸಭೆಯ ಅಧ್ಯಕ್ಷತೆಯನ್ನು ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಸಂಜೀವಕುಮಾರ ಕುಲಕರ್ಣಿ ವಹಿಸಿದ್ದರು. ಅಧ್ಯಕ್ಷರ ಆಯ್ಕೆಯ ನಂತರ ಉಳಿದ ಪದಾಧಿಕಾರಿಗಳ ಆಯ್ಕೆ ನಡೆಯಿತು. ಆದರ್ಶ ಕುಲಕರ್ಣಿ(ಉಪಾಧ್ಯಕ್ಷ), ರಘುನಾಥ ಕೊಂಡಿ(ಕಾರ್ಯದರ್ಶಿ), ಪ್ರಕಾಶ ಕಾಳೆ(ಸಹ ಕಾರ್ಯದರ್ಶಿ), ಮಂಜುನಾಥ ಗ್ರಾಮಪುರೋಹಿತ (ಖಜಾಂಚಿ), ಉದಯ ಸವದಿ(ಸಹ ಖಜಾಂಚಿ) ಆಯ್ಕೆಗೊಂಡರು.

ಸಭೆಯಲ್ಲಿ ಶ್ರೀವಲ್ಲಭಭಟ್ಟ ಸದರಜೋಷಿ, ಹಿರಿಯರಾದ ಶೇಷಗಿರಿ ಕುಲಕರ್ಣಿ, ಶ್ರೀಪಾದಭಟ್ಟ ಜೋಷಿ, ಬಿ.ಎಲ್. ಕುಲಕರ್ಣಿ, ಕೆ.ಬಿ. ದೇಸಾಯಿ, ಅರುಣ ಗ್ರಾಮಪುರೋಹಿತ, ಆರ್.ಡಿ. ಕುಲಕರ್ಣಿ, ಜಗನ್ನಾಥ ಸೂರಭಟ್ಟನವರ, ಎಸ್.ಎಚ್. ಕುಲಕರ್ಣಿ, ಗುರುರಾಜ ಕುಲಕರ್ಣಿ, ಹರೀಶ ಕುಲಕರ್ಣಿ, ಕೃಷ್ಣ ಗ್ರಾಮಪುರೋಹಿತ, ಅರುಣ ಸೂರಭಟ್ಟನವರ, ಮುಕುಂದ ಸೂರಭಟ್ಟನವರ, ಪ್ರಶಾಂತ ಗ್ರಾಮಪುರೋಹಿತ, ಚಂದ್ರಾಮ ಗ್ರಾಮಪುರೋಹಿತ, ಶಂಕ್ರಪ್ಪ ಕುಲಕರ್ಣಿ, ಬಾಬು ಕಾಳೆ, ಎ.ಜಿ. ಕುಲಕರ್ಣಿ, ಸುನೀಲ ಅಂಬೇಕರ, ವಿನಾಯಕ ಗ್ರಾಮಪುರೋಹಿತ, ಅರುಣ ಕುಲಕರ್ಣಿ, ರಾಮಕೃಷ್ಣ ಸದರಜೋಷಿ ಮತ್ತಿತರರು ಉಪಸ್ಥಿತರಿದ್ದರು.

## ಶ್ರೀ ಮಾರುತಿ ದೇವರ ಜಾತ್ರಾ ಮಹೋತ್ಸವ ಇಂದು



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಇಲ್ಲಿನ ಜಂತ್ಲಿ ಶಿರೂರ ಗ್ರಾಮದಲ್ಲಿ ಏ.17ರಂದು ಶ್ರೀ ಮಾರುತಿ ದೇವರ ಜಾತ್ರಾ ಮಹೋತ್ಸವ ನೆರವೇರಲಿದೆ.

ಶ್ರೀರಾಮ ನವಮಿಯಂದು ಮುಂಜಾನೆ 6 ಗಂಟೆಯಿಂದ 9 ಗಂಟೆಯವರೆಗೆ ಶ್ರೀ ಮಾರುತಿ ದೇವರಿಗೆ ರುದ್ರಾಭಿಷೇಕ, ಸಕಲ ವಸ್ತ್ರಾಭರಣಗಳಿಂದ ಅಲಂಕಾರ, ಸಾಯಂಕಾಲ 5 ಗಂಟೆಯಿಂದ ಡೊಳ್ಳು, ಸಕಲ ವಾದ್ಯ ಮೇಳಗಳೊಂದಿಗೆ ಪಾಲಕಿ ಉತ್ಸವ ನಡೆಯುವುದು. ಸಾಯಂಕಾಲ 6 ಗಂಟೆಗೆ ಸಭಾ ಕಾರ್ಯಕ್ರಮ ನಡೆಯಲಿದ್ದು, ಸಾನ್ನಿಧ್ಯವನ್ನು ಚಿಕ್ಕೇನಕೊಪ್ಪದ ಚನ್ನವೀರ ಶರಣರಮಠ ಸುಕ್ಷೇತ್ರ ಬಳಗಾನೂರು ಶಾಖಾಮಠ ಪರಮಪೂಜ್ಯ ಶ್ರೀ ಶಿವಶಾಂತವೀರ ಶರಣರು ವಹಿಸಿಕೊಳ್ಳುವರು.

ನಂತರ ಮಹಾದಾಸೋಹ ನಡೆಯುವುದು. ರಾತ್ರಿ ಗ್ರಾಮದ ಶ್ರೀ ರಾಮ ವಾಲ್ಮೀಕಿ ಯುವಕ ಮಂಡಳದ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಏ.18ರಂದು ಸಾಯಂಕಾಲ 7ಕ್ಕೆ ಶ್ರೀ ಪರಮಪೂಜ್ಯ ಧರ್ಮರಾಜ ಧರ್ಮದಮಠ ಸಾ. ಕಣಗಿನಹಾಳ ಇವರ ಸಾನ್ನಿಧ್ಯದಲ್ಲಿ ಲಘು ರಥೋತ್ಸವ ನಡೆಯುವುದು. ಈ ಕಾರ್ಯಕ್ರಮದಲ್ಲಿ ಸರ್ವ ಸದ್ಭಕ್ತರು ಆಗಮಿಸಿ ದೇವರ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಪುನೀತರಾಗಬೇಕೆಂದು ಹನಮಂತಪ್ಪ ನಾಗಪ್ಪ ಚಿಗರಿಯವರು ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿಕೊಂಡಿದ್ದಾರೆ.

## ಕನ್ನಡ ಚಿತ್ರರಂಗದ ಹಿರಿಯ ನಟ ದ್ವಾರಕೀಶ್ ನಿಧನ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ಚಿತ್ರರಂಗದ ಹಿರಿಯ ನಟ ಹಾಗೂ ನಿರ್ಮಾಪಕ ದ್ವಾರಕೀಶ್ ಅವರು ಮಂಗಳವಾರ ನಿಧನರಾಗಿದ್ದಾರೆ.

81 ವರ್ಷ ಪ್ರಾಯದ ದ್ವಾರಕೀಶ್ ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದು, ಹೃದಯಾಘಾತದಿಂದ ಇಂದು ನಿಧರಾಗಿದ್ದಾರೆ.

ಹುಣಸೂರಿನಲ್ಲಿ ಆಗಸ್ಟ್ 19,1942ರಂದು ದ್ವಾರಕೀಶ್ ಜನಿಸಿದ್ದಾರೆ. ದ್ವಾರಕೀಶ್ ಅವರ ತಂದೆ ಶಮಾರಾವ್ ಮತ್ತು ತಾಯಿ ಜಯಮ್ಮ ಅವರಾಗಿದ್ದಾರೆ. ಶಾರದಾ ವಿಲಾಸ್ ಮತ್ತು ಬನುಮಯ್ಯ ಶಾಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಪಡೆದ ದ್ವಾರಕೀಶ್ ಅವರು, ಸಿಪಿಸಿ ಪಾಲಿಟೆಕ್ನಿಕ್‌ನಿಂದ ಮೆಕ್ಯಾನಿಕಲ್ ಇಂಜಿನಿಯರಿಂಗ್ ಡಿಪ್ಲೊಮಾ ಪದವಿ ಪಡೆದಿದ್ದರು. ಅದಾದ ಬಳಿಕ ಅವರ ಸೋದರನ ಜೊತೆ ಸೇರಿ ಭಾರತ್ ಆಟೋ ಸ್ಪೇರ್ ಸ್ಟೋರ್ ಆರಂಭಿಸಿದ್ದರು.

1964ರಲ್ಲಿ ವೀರ ಸಂಕಲ್ಪ ಎಂಬ ಸಿನಿಮಾ ಮೂಲಕ ಕನ್ನಡ ಚಿತ್ರರಂಗ ಪ್ರವೇಶಿಸಿದ ದ್ವಾರಕೀಶ್, ನಟರಾಗಿ, ಹಾಸ್ಯ ಕಲಾವಿದರಾಗಿ, ಪೋಷಕ ನಟನಾಗಿ ನಟಿಸಿದ್ದಾರೆ. ಅವರು ಕನ್ನಡದ ಕುಳ್ಳ ಎಂದೇ ಖ್ಯಾತರಾಗಿದ್ದಾರೆ. ಕನ್ನಡದ ಪ್ರಮುಖ ನಟರಾದ ವಿಷ್ಣುವರ್ಧನ್ ಮತ್ತು ದ್ವಾರಕೀಶ್ ಜೋಡಿ ಕಳ್ಳ-ಕುಳ್ಳ ಜೋಡಿ ಎಂದು ಪ್ರಸಿದ್ಧವಾಗಿತ್ತು. ದ್ವಾರಕೀಶ್ ಅವರು 1966ರಲ್ಲಿ ತುಂಗಾ ಬ್ಯಾನರ್ಸ್‌ನಡಿ ಮಮತೆಯ ಬಂಧನ ಎಂಬ ಸಿನಿಮಾದ ಸಹ ನಿರ್ಮಾಪಕರಾದರು. 1969ರಲ್ಲಿ ಡಾ. ರಾಜ್‌ಕುಮಾರ್ ಮತ್ತು ಭಾರತಿ ಪ್ರಮುಖ ಪಾತ್ರಗಳಲ್ಲಿ ನಟಿಸಿದ ಸೂಪರ್‌ಹಿಟ್ ಸಿನಿಮಾ ಮೇಯರ್ ಮುತ್ತಣ್ಣ ಮೂಲಕ ಮೊದಲ ಬಾರಿಗೆ ಸ್ವತಂತ್ರ ನಿರ್ಮಾಪಕರಾದರು.

### ಜಿಲ್ಲಾಡಳಿತದ ನಿರ್ದೇಶನದಂತೆ ಸರಳ ರೀತಿಯಲ್ಲಿ ಆಚರಣೆಗೆ ಸಿದ್ಧತೆ

## ದೂದಪೀರಾಂರವರ ಉರುಸು ಏ.21ರಿಂದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ-ಮುಸ್ಲಿಂ ಭಾವೈಕ್ಯತೆ ಮತ್ತು ಸರ್ವಧರ್ಮ ಸಮನ್ವಯತೆಗೆ ಸಾಕ್ಷಿಯಾದ ಲಕ್ಷ್ಮೇಶ್ವರದ ದೂದನಾನಾ ದರ್ಗಾದ ದೂದಪೀರಾಂರವರ 135ನೇ ಉರುಸು ಕಾರ್ಯಕ್ರಮ ಏ.21 ಮತ್ತು ಏ.22 ಎರಡು ದಿನಗಳ ಕಾಲ ನಡೆಯಲಿದೆ. ಈ ಬಾರಿ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸರಳ ರೀತಿಯಲ್ಲಿ ಆಚರಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ದೂದಪೀರಾಂ ದರ್ಗಾ ಕಮಿಟಿಯ ಅಧ್ಯಕ್ಷ ಸುಲೇಮಾನ ಕಣಕೆ ಮತ್ತು ಎಸ್.ಕೆ. ಹವಾಲ್ದಾರ ಮಾಹಿತಿ ನೀಡಿದರು.

ಅವರು ಮಂಗಳವಾರ ದರ್ಗಾ ಹಾಲ್‌ನಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಉರುಸು ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು. ನೂರಾರು ವರ್ಷಗಳಿಂದ ಹಿಂದೂ-ಮುಸ್ಲಿ ಮತ್ತು ಸರ್ವ ಧರ್ಮದ ಸಮಾಜ ಬಾಂಧವರು ಇಲ್ಲಿನ ದೂದನಾನಾರವರಿಗೆ ಶ್ರದ್ಧಾ-ಭಕ್ತಿಯಿಂದ ನಡೆದುಕೊಳ್ಳುತ್ತಿದ್ದಾರೆ. ತನ್ಮೂಲಕ ಭಕ್ತಿ ಮತ್ತು ಜಾಗೃತ ಕೇಂದ್ರವಾಗಿ ಬೆಳೆದು ನಿಂತಿದೆ. ಇಂದು ದೇಶಾದ್ಯಂತ ಸಾವಿರಾರು ಭಕ್ತರು ಈ ಕ್ಷೇತ್ರಕ್ಕೆ ಆಗಮಿಸಿ ತಮ್ಮ ಕಷ್ಟ-ಕಾರ್ಪಣ್ಯಗಳಿಂದ ಮುಕ್ತಿ



ಹೊಂದುತ್ತಿದ್ದಾರೆ. ನಾಡಿನ ಅನೇಕ ಭಕ್ತರ ಸಹಕಾರದಿಂದ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ, ಅಗತ್ಯ ಸೌಲಭ್ಯಗಳನ್ನು ಮಾಡಲಾಗಿದೆ.

ಪ್ರತಿವರ್ಷದಂತೆ ಈ ವರ್ಷವೂ ದೂದಪೀರಾಂರವರ 135ನೇ ವರ್ಷದ ಉರುಸು ಕಾರ್ಯಕ್ರಮ ಆಚರಿಸಲು ನಿರ್ಧರಿಸಲಾಗಿದೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ತಾಲೂಕಾಡಳಿತದ ನಿರ್ದೇಶನದಂತೆ ಖವ್ವಾಲಿ, ಧರ್ಮಜಾಗೃತಿ ಸಭೆ ಸೇರಿ ಹಲವಾರು ಕಾರ್ಯಕ್ರಮಗಳನ್ನು ಕೈಬಿಟ್ಟು ಧಾರ್ಮಿಕ ಸಂಪ್ರದಾಯಗಳನ್ನು ಪರಂಪರೆಯಂತೆ ಆಚರಿಸಲು ನಿರ್ಧರಿಸಲಾಗಿದೆ. ಈ ಕುರಿತಂತೆ ಜಿಲ್ಲಾಡಳಿತ, ತಾಲೂಕಾಡಳಿತ ಮತ್ತು ಪೊಲೀಸ್ ಇಲಾಖೆಗೆ ಮಾಹಿತಿ ನೀಡಲಾಗಿದ್ದು, ಚುನಾವಣೆ ಮಾರ್ಗಸೂಚಿಯಂತೆ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ, ಉಪಾಧ್ಯಕ್ಷ ಎ.ಜಿ. ಸೂರಣಗಿ, ದಾದಾಪೀರ ಮುಚ್ಚಾಲೆ, ದರ್ಗಾ ಕಮಿಟಿ ವಾಯ್ಸ್ ಚೇರಮನ್ ಆಯ್.ಕೆ. ಮಿರ್ಜಾ, ಕಾರ್ಯದರ್ಶಿ ಡಿ.ಡಿ. ಕಾರಡಗಿ, ಕೆ.ಡಿ. ಸೂರಣಗಿ, ಎಫ್.ಎನ್. ಪಲ್ಲಿ, ಎನ್.ಎಚ್. ಸಿದ್ದಿ, ಎಸ್.ಎಚ್. ಶಮಲೆವಾಲೆ, ಎಂ.ಎಚ್. ಸಿದ್ದಾಪೂರ, ಎ.ಕೆ. ಸೂರಣಗಿ ಎಂ.ಎ. ಮುಳಗುಂದ, ಯು.ಡಿ. ಚೌರಿ, ಅಬ್ದುಲ್‌ಕರೀಂ ಕರೀಮ್‌ಖಾನವರ, ಜಾಫರಸಾಬ ಹುಬ್ಬಳ್ಳಿ, ಆಜಮ್ ಜಮಾದಾರ, ಜಾಕೀರ ಹವಾಲ್ದಾರ, ಫಿರ್ದೋಶ ಆಡೂರ, ಸಿಕಂದರ ಕಣಕೆ ಸೇರಿ ಹಲವರಿದ್ದರು.

ಎನ್.ಎಂ. ಗದಗ ಮಾತನಾಡಿ, ಉರುಸು ಕಾರ್ಯಕ್ರಮಕ್ಕೆ ನಾಡಿನಾದ್ಯಂತ ಸಾವಿರಾರು ಭಕ್ತರು ಆಗಮಿಸುವದರಿಂದ ಅವರಿಗೆ ತೊಂದರೆಯಾಗದಂತೆ ಇಲ್ಲಿನ ದರ್ಗಾ ಹಾಗೂ ಅಂಜುಮನ್ ಕಮಿಟಿ ವತಿಯಿಂದ ಅಗತ್ಯ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ. ಆಗಮಿಸಿದ ಭಕ್ತರಿಗೆ ಕುಡಿಯುವ ನೀರು, ವಾಹನ ನಿಲುಗಡೆ, ವಸತಿ ಹಾಗೂ ಜನರ ದಟ್ಟಣೆ ನಿಯಂತ್ರಣಕ್ಕೆ ಸ್ವಯಂ ಸೇವಕರನ್ನು ನೇಮಿಸಲಾಗಿದ್ದು, ಯಾವುದೇ ಅಹಿತಕರ ಘಟನೆಗಳಾಗದಂತೆ ಮುನ್ನೆಚ್ಚರಿಕೆ ಕೈಗೊಳ್ಳಲಾಗಿದೆ ಎಂದರು.

## ಜಿಮ್ಸ್ ಕಾರ್ಮಿಕರ ಸಂಘದಿಂದ ಡಾ.ಅಂಬೇಡ್ಕರ್ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಹೊರಗುತ್ತಿಗೆ ಕಾರ್ಮಿಕರ ಸಂಘದ ವತಿಯಿಂದ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಜಯಂತ್ಯುತ್ಸವ ಕಾರ್ಯಕ್ರಮವನ್ನು ರಕ್ತದಾನ ಹಾಗೂ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲ ನೀಡುವುದರ ಮೂಲಕ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಳ್ಳಿ ರೋಗಿಗಳಿಗೆ ಹಣ್ಣು-ಹಂಪಲು ವಿತರಿಸಿ ಮಾತನಾಡಿ, ರಕ್ತದಾನ ಮಾಡಿದ ಎಲ್ಲ ಸಿಬ್ಬಂದಿಗಳಿಗೆ ಅಭಿನಂದನೆಯನ್ನು ಸಲ್ಲಿಸಿದರು. ಅತಿಥಗಳಾಗಿ ಆಗಮಿಸಿದ ಜಿಮ್ಸ್‌ನ ವೈದ್ಯಕೀಯ ಅಧೀಕ್ಷಕಿ ರೇಖಾ ಸೋನಾವನೆ, ಅಶೋಕ ಆಚಾರ, ಹಿರಿಯ ನರ್ಸಿಂಗ್ ಅಧಿಕಾರಿ ಜಡಿ, ಸಂಘದ ಪದಾಧಿಕಾರಿಗಳಾದ ರಾಜು ಸಾಬೋಜಿ, ರಾಘವೇಂದ್ರ ನಾಗನಾಥನಹಳ್ಳಿ, ವಿವೇಕ ಮಾನೆ, ಹುಲಿಗೇಶ ಬಳ್ಳಾರಿ, ಮೈಲಾರಿ ಹಾದಿಮನಿ, ಮಂಜುನಾಥ ರಾಮೇನಹಳ್ಳಿ, ಹುಲಿಗೇಶ ಚೌಡಮ್ಮನವರ, ಭೀಮಪ್ಪ ದೊಡ್ಡಮನಿ, ಇಜಾಜಖಾನ ಧಾರವಾಡ, ಮಮತಾಜ ರೋಣ, ರಜಿಯಾ ಅನ್ಸಾರೆ, ವಿಜಯಲಕ್ಷ್ಮೀ ಗೊಲ್ಲರ, ವೇದಾ ಸುಣಗಾರ, ನಾಗರಾಜ ಯರಗುಡಿ, ಮಂಜುನಾಥ ದೊಡ್ಡಮನಿ, ಶರಣಪ್ಪ ಚಿನ್ನಮ್ಮನವರ, ಮಾಂತೇಶ ದೊಡ್ಡಮನಿ, ಸಾಗರ ಚಲವಾದಿ, ಚಂಪಾವತಿ ಗುಳೇದ, ಮಾರ್ತಾಂಡ ಹೊನ್ನಿನಾಯ್ಕರ್, ಕಿರಣ ಮಡಿವಾಳರ, ಪ್ರವೀಣ ಅಸೂಟಿ, ಮಾಂತೇಶ ಹಾದಿಮನಿ, ಮಂಜುನಾಥ ಪೂಜಾರ, ದುರಗಪ್ಪ ಚೌಳ್ಳಪ್ಪನವರ, ಮಲ್ಲಪ್ಪ ಹಾದಿಮನಿ, ಸಂತೋಷ ಚಲವಾದಿ ಮುಂತಾದವರು ಉಪಸ್ಥಿತರಿದ್ದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ನಿಜ ಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಕಾಂಗ್ರೆಸ್ ಮೀನುಗಾರಿಕೆ ವಿಭಾಗದ ಶಹರ ಘಟಕ ಅಧ್ಯಕ್ಷ ಸಂಗಮೇಶ ಹಾದಿಮನಿ ಸಂವಿಧಾನ ಶಿಲ್ಪಿ ಡಾ ಬಿ ಆರ್ ಅಂಬೇಡ್ಕರ್ 133ನೇ ಜಯಂತಿ ನಿಮಿತ್ತ ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡುವುದರ ಮೂಲಕ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜ ಟ್ರಸ್ಟ್ ಸದಸ್ಯರು ಹಾಗೂ ಕಾಂಗ್ರೆಸ್ ಸಾಮಾಜಿಕ ಜಾಲತಾಣ ಉಪಾಧ್ಯಕ್ಷ ಮಲ್ಲು ಬಾರಕೇರ, ಸಮಾಜ ಟ್ರಸ್ಟ್ ಶಹರ ಘಟಕ ಕಾರ್ಯದಶಿ ಬಸವರಾಜ ಗುಡಿಸಾಗರ ಇದ್ದರು.

### ಕಲಘಟಗಿಯ ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಶಿವಜ್ಞಾನದ ಅರಿವಿಗೆ ಗುರು ಕಾರುಣ್ಯ ಅವಶ್ಯಕ

■ ವಿಜಯಸಾಕ್ಷಿ ಸುದ್ದಿ, ಕಲಘಟಗಿ

ಶಿವಶಕ್ತಿಯಿಂದ ಈ ಜಗತ್ತು ನಿರ್ಮಾಣಗೊಂಡಿದೆ. ಶಿವನ ಬಿಟ್ಟು ಶಕ್ತಿ, ಶಕ್ತಿ ಬಿಟ್ಟು ಶಿವನಿಲ್ಲ. ಶಿವಜ್ಞಾನದ ಸಂಪತ್ತಿನ ಅರಿವಿಗಾಗಿ ಗುರು ಕಾರುಣ್ಯ ಅತ್ಯಂತ ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ತಾಲೂಕಿನ ಬೇಗೂರು ಗ್ರಾಮದಲ್ಲಿ ಗ್ರಾಮದೇವತೆಯ ನೂತನ ದೇವಾಲಯ ಉದ್ಘಾಟನೆ, ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವರು ಕೊಟ್ಟ ಕೊಡುಗೆ ಸಾಮಾನ್ಯವಾದುದಲ್ಲ. ಅರಿವುಳ್ಳ ಮಾನವ ಜೀವನದ ಜೊತೆಗೆ ಮನುಷ್ಯ ಬದುಕಿ ಬಾಳಲು ನೆಲ, ಜಲ, ಅನ್ನ, ಗಾಳಿ ಮೊದಲಾದ ಅಮೂಲ್ಯ ವಸ್ತುಗಳನ್ನು ಕರುಣಿಸಿದ್ದಾನೆ. ದೇವರ ಮೇಲಿನ ನಂಬಿಕೆ ಕಳೆದುಕೊಳ್ಳಬಾರದು. ನಂಬಿಕೆಯಿದ್ದರೆ



ಕಲ್ಲು ಕೂಡಾ ದೇವರಾಗಿ ಕಾಣುತ್ತದೆ. ನಂಬಿಕೆ ಕಳೆದುಕೊಂಡರೆ ದೇವರು ಧರ್ಮ ಇಲ್ಲವೇ ಇಲ್ಲ. ದೇವರು, ಗುರು, ಮಂತ್ರ, ವೈದ್ಯ, ತೀರ್ಥ ಇವುಗಳಲ್ಲಿ ಯಾವ ನಂಬಿಕೆ ಇಟ್ಟು ನಡೆಯುತ್ತೇವೆಯೋ ಆ ಫಲಗಳನ್ನು ಪಡೆಯಲು ಸಾಧ್ಯವಾಗುತ್ತದೆ. ಹಳೆಯದಾದ ಗ್ರಾಮ ದೇವತೆ ದೇವಸ್ಥಾನವನ್ನು ಪುನರ್ ನಿರ್ಮಾಣ ಮಾಡಿ ಇಂದು ದೇವತಾ ವಿಗ್ರಹಗಳನ್ನು ಪ್ರತಿಷ್ಠಾಪಿಸಿ ಕಳಸರೋಹಣ ನೆರವೇರಿಸಿದ್ದು ಸಂತೊಷದ ಸಂಗತಿ ಎಂದರು.

ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವ ಕಳಸ ಕನ್ನಡಿಯೊಂದಿಗೆ ಸಂಭ್ರಮದಿಂದ ಜರುಗಿತು.

ಸಮಾರಂಭವನ್ನು ಮುಕ್ತಿಮಂದಿರ ಕ್ಷೇತ್ರದ ವಿಮಲರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳವರು ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು. ನೇತೃತ್ವವನ್ನು ಎಂ.ಚಂದರಗಿ-ಕಟಕೋಳ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ವಹಿಸಿ ಉಪದೇಶಾಮೃತವನ್ನಿತ್ತರು. ಸಮಾರಂಭದ ಸಮ್ಮುಖವನ್ನು ಕಲಘಟಗಿ ಹನ್ನೆರಡು ಮಠದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಿದ್ದರು.

ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

### ಸಂಸ್ಕೃತಿ-ಸಂಸ್ಕಾರ ಶಿಬಿರ ಪ್ರಾರಂಭೋತ್ಸವ ಸಮಾರಂಭ

## ಮಕ್ಕಳು ಸುಸಂಸ್ಕೃತರಾಗಿ ಬೆಳೆಯಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಚಿಕ್ಕಂದಿನಿಂದಲೇ ಕ್ರಮಬದ್ಧ ಜೀವನಶೈಲಿ ಅಳವಡಿಸಿಕೊಂಡು ಬೆಳೆಯಬೇಕು. ಇಲ್ಲದಿದ್ದರೆ ಅವರೆಂದೂ ಸದ್ವರ್ತನೆಯ ಗುಣಶೀಲ ನಾಗರಿಕರಾಗಿ ಬೆಳೆಯಲಾರರು. ಮಕ್ಕಳು ಸಚ್ಚಾರಿತ್ರ್ಯವಂತರಾಗಿ ಬೆಳೆಯದಿದ್ದರೆ ದೇಶ ಎಷ್ಟೇ ಪ್ರಗತಿ ಹೊಂದಿದರೂ ಪ್ರಗತಿಯ ಪರಿಣಾಮ ಫಲಕಾರಿಯಾಗದೇ ಮುಂದೊಂದು ದಿನ ಆ ಪ್ರಗತಿ ಹಿನ್ನಡೆಯಾಗಬಹುದು. ಆದ್ದರಿಂದ ದೇಶವು ಪ್ರಗತಿ ಪಥದಲ್ಲಿ ಮುನ್ನಡೆಯಲು ಮಕ್ಕಳು ಸುಸಂಸ್ಕೃತರಾಗಿ ಬೆಳೆಯಬೇಕೆಂದು ಪ್ರೊ. ಕೆ.ಎಚ್. ಬೇಲೂರ ಅಭಿಪ್ರಾಯಪಟ್ಟರು.

ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಗದಗ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024



ಗದಗ ಇವರುಗಳ ಸಹಯೋಗದಲ್ಲಿ ಬೇಸಿಗೆ ರಜೆ ಪ್ರಯುಕ್ತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗಾಗಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವ ಪ್ರಭೆ ಕ್ಯಾಂಪಸ್) ಆವರಣದಲ್ಲಿ ಆಯೋಜಿಸಿರುವ 19ನೇ ಸಂಸ್ಕೃತಿ-ಸಂಸ್ಕಾರ ಶಿಬಿರ ಪ್ರಾರಂಭೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗಣ್ಯ ಉದ್ದಿಮೆದಾರ ಪ್ರಣವ ಎಸ್.ವಾರಕರ ಶಿಬಿರ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ದಿನಮಾನದಲ್ಲಿ ಇಂಥ ಶಿಬಿರಗಳ ಅಗತ್ಯವಿದೆ. ಇದೊಂದು ಮಾದರಿಯ ಮತ್ತು ಅನುಕರಣೀಯ ಶಿಬಿರವಾಗಿದೆ. ಈ ಶಿಬಿರದ ಯಶಸ್ಸಿನಲ್ಲಿಯೇ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವದ ಸಾರ್ಥಕತೆ ಅಡಗಿದೆ ಎಂದರು.

ವೇದಿಕೆಯಲ್ಲಿ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ, ಹೊಂಬಳ ಸರಕಾರಿ ಪಿ.ಯು. ಕಾಲೇಜು ಉಪನ್ಯಾಸಕ ಹನಮಂತಗೌಡ ಬಿ.ಗೌಡರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಹಿರಿಯ ಸದಸ್ಯೆ ವಿಜಯಲಕ್ಷ್ಮೀ ಮೇಕಳಿ ಉಪಸ್ಥಿತರಿದ್ದರು.

ಶಿಬಿರ ಶಿಕ್ಷಕಿ ಸುನಂದಾ ಜ್ಯಾನೋಪಂತರ ಪ್ರಾರ್ಥನೆ ಹೇಳಿದರು. ಶಿಬಿರ ಶಿಕ್ಷಕ ಚೇತನ ಚುಂಚಾ ಸ್ವಾಗತ ಕೋರಿದರು. ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಯಶ್ರೀ ಡಾವಣಗೇರಿ ವಂದಿಸಿದರು. ಬಸವೇಶ್ವರ ಪ್ರಾರ್ಥಮಿಕ ಶಾಲಾ ದೈಹಿಕ ಶಿಕ್ಷಣ ಶಿಕ್ಷಕ ಮತ್ತು ಶಿಬಿರದ ಸಹ ಸಂಯೋಜಕ ಎಸ್.ಎಂ. ಬುರಡಿ ಕಾರ್ಯಕ್ರಮ ನಿರೂಪಿಸಿದರು.

## ಹುಲಕೋಟಿ ಶ್ರೀ ಕರಿಯಮ್ಮ ದೇವಿಯ ರಥೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹುಲಕೋಟಿ ಗ್ರಾಮದ ಶ್ರೀ ರಾಮ ಮಂದಿರದಲ್ಲಿ ಶ್ರೀ ರಾಮ ನವಮಿ ಕಾರ್ಯಕ್ರಮಗಳನ್ನು ಏ. 17ರಂದು ವಿಜೃಂಭಣೆಯಿಂದ ಆಚರಿಸಲಾಗುವುದು. ಬೆಳಿಗ್ಗೆ ಶ್ರೀರಾಮನಿಗೆ ಅಭಿಷೇಕ, 10 ಗಂಟೆಗೆ ಶ್ರೀರಾಮನ ತೊಟ್ಟಿಲೋತ್ಸವ ಕಾರ್ಯಕ್ರಮ, ಮಧ್ಯಾಹ್ನ ಸಕಲ ಸದ್ಭಕ್ತರಿಗೆ ಪಾನಕ ಪ್ರಸಾದ ಸೇವೆ ನೆರವೇರಲಿದೆ.

ಏ. 18ರಂದು ಗ್ರಾಮ ದೇವತೆಯಾದ ಶ್ರೀ ಕರಿಯಮ್ಮ ದೇವಿಯ ಮಹಾ ರಥೋತ್ಸವ ಜರುಗಲಿದ್ದು, ಬೆಳಿಗ್ಗೆ ಗ್ರಾಮದ ಎಲ್ಲಾ ದೇವರಿಗೆ ಅಭಿಷೇಕ, ನಂತರ ಶ್ರೀರಾಮ ಭಜನಾ ಸಂಘದವರಿಂದ ಶ್ರೀರಾಮ ಮಂದಿರದಿಂದ ಗ್ರಾಮದಲ್ಲಿ ದಿಂಡಿಯ ಪ್ರದಕ್ಷಿಣೆ ಕಾರ್ಯಕ್ರಮ ನಡೆಯುವುದು. ಮಧ್ಯಾಹ್ನ ಗ್ರಾಮದ ಎಲ್ಲಾ ದೇವರಿಗೆ ಉಡಿ ತುಂಬುವ ಕಾರ್ಯಕ್ರಮ, ಪಾಲಕಿ ಸೇವೆ, ಮಧ್ಯಾಹ್ನ 1.30ಕ್ಕೆ ಅನ್ನ



ಸಂತರ್ಪಣೆ ನೇರವೇರುವುದು.

ಸಾಯಂಕಾಲ 6 ಗಂಟೆಗೆ ಶ್ರೀ ಕರಿಯಮ್ಮ ದೇವಿಯ ರಥೋತ್ಸವ ವಿಜೃಂಭಣೆಯಿಂದ ಜರುಗುವುದು. ಏ.19ರ ಸಾಯಂಕಾಲ 6 ಗಂಟೆಗೆ ಲಘು ರಥೋತ್ಸವವು (ಕಡುಬಿನ ಕಾಳಗ) ಜರುಗಲಿದೆ. ಗ್ರಾಮದ ಸರ್ವ ಸದ್ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ಗ್ರಾಮ ದೇವತೆಯಾದ ಶ್ರೀ ಕರಿಯಮ್ಮ ದೇವಿಯ ಆಶೀರ್ವಾದ ಪಡೆದುಕೊಳ್ಳಬೇಕೆಂದು ದೇವಸ್ಥಾನ ಟ್ರಸ್ಟ್ ಕಮಿಟಿಯವರು ವಿನಂತಿಸಿದ್ದಾರೆ.

### ಜಾನುವಾರುಗಳಿಗೆ ಮೇವು ಕೊರತೆ ನೀಗಿಸಲು ತಾಲೂಕಾಡಳಿತದಿಂದ ಮೇವು ಬ್ಯಾಂಕ್ ಆರಂಭ

# ಕೈಗೆಟಕುವ ದರದಲ್ಲಿ ಮೇವು ಪೂರೈಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬರಗಾಲದಿಂದಾಗಿ ಜಾನುವಾರುಗಳಿಗೆ ಎದುರಾಗಿರುವ ಮೇವಿನ ಕೊರತೆ ನೀಗಿಸಲು ತಾಲೂಕು ಆಡಳಿತದಿಂದ ಮೇವಿನ ಬ್ಯಾಂಕ್ ಆರಂಭ ಮಾಡಲಾಗಿದೆ. ಪ್ರತಿ ಕೆ.ಜಿ ಮೇವಿಗೆ ಎರಡು ರೂಪಾಯಿಯಂತೆ ರೈತರಿಗೆ ಕೈಗೆಟುಕುವ ದರದಲ್ಲಿ ತಾಲೂಕು ಆಡಳಿತದಿಂದ ಮೇವನ್ನು ಮಾರಾಟ ಮಾಡಲಾಗುತ್ತದೆ. ಇದರ ಸದುಪಯೋಗವನ್ನು ಕೊಣ್ಣೂರು ಹೋಬಳಿ ಮಟ್ಟದ ಎಲ್ಲ ರೈತರು ಪಡೆದುಕೊಳ್ಳಬೇಕೆಂದು ನರಗುಂದ ತಹಸೀಲ್ದಾರ ಶ್ರೀಶೈಲ್ ತಳವಾರ ಹೇಳಿದರು.

ಕೊಣ್ಣೂರಿನ ಎಪಿಎಂಸಿ ಆವರಣದಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಆಡಳಿತ ವತಿಯಿಂದ 2024-25ನೇ ಸಾಲಿನ ಬರಗಾಲ ಯೋಜನೆಯ ಅಡಿಯಲ್ಲಿ ರೈತರಿಗೆ ರಿಯಾಯತಿ ದರದಲ್ಲಿ ಮೇವು ಪೂರೈಸುವ ಮೇವು ಬ್ಯಾಂಕ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ತಾಲೂಕಿನಲ್ಲಿ ಬರಗಾಲದಿಂದಾಗಿ ಕುಡಿಯುವ ನೀರು, ಜಾನುವಾರಗಳಿಗೆ ಮೇವಿನ ಕೊರತೆ ನೀಗಿಸಲು ತಾಲೂಕು ಆಡಳಿತ ಕ್ರಮಗಳನ್ನು ಕೈಗೊಳ್ಳುತ್ತಿದೆ. ಜಾನುವಾರುಗಳಿಗೆ ಎದುರಾಗಿರುವ ಮೇವಿನ ಕೊರತೆ ನೀಗಿಸಲು ಸದ್ಯ ಕೊಣ್ಣೂರು ಹೋಬಳಿ ಮಟ್ಟದಲ್ಲಿ ಸುಮಾರು



ಎರಡೂವರೆ ಸಾವಿರ ಜಾನುವಾರಗಳಿಗೆ ಮೇವಿನ ಕೊರತೆ ತಪ್ಪಿಸಲು ಮೇವಿನ ಬ್ಯಾಂಕ್ ಉದ್ಘಾಟನೆ ಮಾಡಲಾಗಿದೆ. ಇದರ ಸದುಪಯೋಗವನ್ನು ಕೊಣ್ಣೂರು ಹೋಬಳಿ ವ್ಯಾಪ್ತಿಗೆ ಬರುವ ವಾಸನ, ಶೀರೋಳ, ಕೊಣ್ಣೂರು, ರೆಡ್ಡರ ನಾಗನೂರು, ಹದಲಿ, ಸುರಕೋಡ ಮತ್ತು ಬೈರನಹಟ್ಟಿ ಗ್ರಾ.ಪಂ ವ್ಯಾಪ್ತಿಯ ರೈತರು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಮೇವು ಬ್ಯಾಂಕ್‌ನಿಂದ 1 ಜಾನುವಾರಿಗೆ ಪ್ರತಿನಿತ್ಯ 6 ಕೆ.ಜಿ ಮೇವನ್ನು ಕೊಡಲಾಗುವುದು. ಪ್ರತಿ ರೈತರಿಗೆ 50 ಕೆ.ಜಿವರೆಗೂ ಮೇವನ್ನು ವಿತರಿಸಲಾಗುವುದು. ರೈತರು ಒಂದು ಕೆ.ಜಿ ಮೇವನ್ನು 2 ರೂಪಾಯಿ ಕೊಟ್ಟು ಖರೀದಿ ಮಾಡಬಹುದು. ಇದರಿಂದ ಬರಗಾಲದಲ್ಲಿ ರೈತರ ಜಾನುವಾರುಗಳಿಗೆ ಎದುರಾಗಿರುವ ಮೇವಿನ ಕೊರತೆಯನ್ನು ನೀಗಿಸಲು ಸಹಕಾರಿಯಾಗುತ್ತದೆ ಎಂದರು.

ಕೊಣ್ಣೂರು ಗ್ರಾಮದ ರೈತರಾದ ಸಿದ್ದಪ್ಪ ಡಂಬಳ ಮತ್ತು ಅಲ್ಲಿಸಾಬ್ ಸುರಕೋಡ ಅವರಿಗೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಬಿರಾದರ್ ಮೇವಿನ ಗಂಟನ್ನು ವಿತರಿಸುವ ಮೂಲಕ ಮೇವಿನ ಬ್ಯಾಂಕ್‌ನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕೊಣ್ಣೂರು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಮಂಜುನಾಥ ಗಣಿ, ಗ್ರಾಮ ಆಡಳಿತಾಧಿಕಾರಿ ಟಿ.ಆರ್. ಪಾಟೀಲ್, ಪಶುಪಾಲನಾ ಇಲಾಖೆಯ ಜಿ.ಎ. ನಿರಾಣಿ, ಕಂದಾಯ ನಿರೀಕ್ಷಕ ಐ.ವಾಯ್. ಕಳಸಣ್ಣವರ, ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

> ಮೇವಿನ ಬ್ಯಾಂಕ್‌ನಲ್ಲಿ ಸದ್ಯ 4 ಟನ್ ಮೇವು ದಾಸ್ತಾನು ಮಾಡಲಾಗಿದ್ದು, ಮುಂದಿನ 2-3 ತಿಂಗಳಿಗೆ ಸಾಕಾಗುವಷ್ಟು ಮೇವನ್ನು ಸಂಗ್ರಹ ಮಾಡಿಕೊಳ್ಳಲಾಗಿದೆ. ಈಗಾಗಲೇ ಮೇವು ಪೂರೈಕೆ ಮತ್ತು ಸರಬರಾಜಿಗೆ ಟೆಂಡರ್ ಕರೆದು ಟೆಂಡರುದಾರರನ್ನು ಗುರ್ತಿಸಲಾಗಿದೆ. ಮೇವು ಬ್ಯಾಂಕ್‌ನಲ್ಲಿ ಮೇವು ಖಾಲಿಯಾದ ಕೂಡಲೇ ಟೆಂಡರುದಾರರ ಮೂಲಕ ಮೇವು ದಾಸ್ತಾನು ಮಾಡಲಾಗುವುದು. ಮೇವು ಬ್ಯಾಂಕ್ ಪ್ರತಿನಿತ್ಯ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5.30ರವರೆಗೆ ತೆರದಿರುತ್ತದೆ. ಇದರ ಸದುಪಯೋಗವನ್ನು ರೈತರು ಪಡೆದುಕೊಳ್ಳಬೇಕು.
>
> – ಡಾ. ವೆಂಕಟೇಶ.
> ಸಹಾಯಕ ನಿರ್ದೇಶಕರು,
> ಪಶುಸಂಗೋಪನಾ ಇಲಾಖೆ, ನರಗುಂದ.

## ಎಚ್‌ಡಿಕೆ ಮಹಿಳಾ ಸಮುದಾಯದ ಕ್ಷಮೆ ಕೇಳಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಸಂಸ್ಕೃತಿಯಲ್ಲಿ ಹೆಣ್ಣೆಂದರೆ ಸಾಕ್ಷಾತ್ ದೇವಿಯ ಸ್ವರೂಪ. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಸ್ತ್ರೀಯರನ್ನು ಅವಮಾನಿಸುವ ಮೂಲಕ ಭಾರತೀಯ ಸಂಸ್ಕೃತಿ ಹಾಗೂ ತಾಯಿ ಸ್ಥಾನವನ್ನು ಅಗೌರವಿಸಿದ್ದಾರೆ. ಇಂತಹ ರಾಜಕಾರಣಿಗಳು ನಮಗೆ ಬೇಕಿಲ್ಲ ಎಂದು ಸಾಮಾಜಿಕ ಕಾರ್ಯಕರ್ತ ಕರೀಮಸಾಬ ಸುಣಗಾರ ಹೇಳಿದ್ದಾರೆ.

ಈ ಬಗ್ಗೆ ಅವರು ಪತ್ರಿಕಾ ಹೇಳಿಕೆ ನೀಡಿ, ಸಂವಿಧಾನಿಕ ಉನ್ನತ ಹುದ್ದೆಯಲ್ಲಿದ್ದು, ರಾಜ್ಯದ ಆಡಳಿತ ನಿರ್ವಹಿಸಿರುವ ಕುಮಾರಸ್ವಾಮಿಯವರಿಂದ ಇಂತಹ ಅಗೌರವವನ್ನು ಮಹಿಳಾ ಸಮುದಾಯ ಸಹಿಸದು. ಹೆಣ್ಣು ಕಾಳಿ ಆಗುವ ಮುನ್ನವೇ ಮಾಜಿ ಮುಖ್ಯಮಂತ್ರಿಗಳು ಮಹಿಳಾ ಸಮುದಾಯದಲ್ಲಿ ಕ್ಷಮೆ ಯಾಚಿಸಬೇಕು. ಮುಖ್ಯಮಂತ್ರಿ



ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ಜನ ಪರವಾಗಿ ಕಾರ್ಯಕ್ರಮಗಳನ್ನ ಅನುಷ್ಠಾನ ಮಾಡಿ ಜನರ ಮನ ಗೆದ್ದಿದೆ, ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲರು ರಾಜ್ಯ ಸರಕಾರದ ಜನಪರ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಮೂಲಕ ಅವರಿಂದ ಸೈ ಎನಿಸಿಕೊಂಡಿದ್ದಾರೆ ಎಂದು ಕರೀಮಸಾಬ ಸುಣಗಾರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಲೋಕಸಭೆ ಚುನಾವಣೆ: 'ಮೋದಿ ಅಲೆ ಇಲ್ಲ, ಭ್ರಮೆಯಲ್ಲಿರಬೇಡಿ' ಎಂದ ಬಿಜೆಪಿ ಅಭ್ಯರ್ಥಿ

**■ವಿಜಯಸಾಕ್ಷಿ ಸುದ್ದಿ, ಮುಂಬಯಿ**

ಲೋಕಸಭೆ ಚುನಾವಣೆ ವೇಳೆ ಯಾವುದೇ ಮೋದಿ ಅಲೆ ಇಲ್ಲ ಎಂದು ಪ್ರತಿಪಕ್ಷಗಳ ನಾಯಕರು ಹಲವು ಬಾರಿ ಹೇಳಿದ್ದರು, ಇದೀಗ ಅಮರಾವತಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನವನೀತ್ ರಾಣಾ ಅವರು ದೇಶದಲ್ಲಿ 'ಮೋದಿ ಅಲೆ ಇಲ್ಲ, ಮೋದಿ ಅಲೆ ಇದೆ ಎಂಬ ಭ್ರಮೆಯಲ್ಲಿರಬೇಡಿ ಎಂದು ಬಿಜೆಪಿ ಕಾರ್ಯಕರ್ತರಿಗೆ ಹೇಳಿರುವ ವಿಡಿಯೋ ವೈರಲ್ ಆಗಿದೆ.

ಬಿಜೆಪಿ ಅಭ್ಯರ್ಥಿ ನವನೀತ್ ರಾಣಾ ತಮ್ಮ ಕ್ಷೇತ್ರದಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡುವಾಗ ಈಗ ಮೋದಿ ಅಲೆ ಇಲ್ಲ ಎಂದು ಹೇಳಿಕೆ ನೀಡಿದ್ದಾರೆ. ಸಭೆಗೆ ಮಾಧ್ಯಮದವರಿಗೆ ಅವಕಾಶ ನೀಡಿರಲಿಲ್ಲ. ಆದರೆ ಆಕೆ ಹೇಳಿಕೆ



ನೀಡಿರುವ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕವಾಗಿ ವೈರಲ್ ಆಗಿದೆ.

ನಾವು ಈ ಚುನಾವಣೆಯನ್ನು ಗ್ರಾಮ ಪಂಚಾಯಿತಿ ಚುನಾವಣೆಯಂತೆ ಎದುರಿಸಬೇಕಾಗುತ್ತದೆ. ಮಧ್ಯಾಹ್ನದ ವೇಳೆಗೆ ಎಲ್ಲ ಮತದಾರರನ್ನು ಬೂತ್‌ಗೆ ಕರೆತಂದು ಮತ ಹಾಕುವಂತೆ ಹೇಳಬೇಕು. ಮೋದಿ ಅಲೆ ಇದೆ ಎಂಬ ಭ್ರಮೆಯಲ್ಲಿ ಉಳಿಯಬೇಡಿ. ಕಳೆದ ಚುನಾವಣೆಯಲ್ಲಿ, ಮೋದಿ ಅಲೆಯ ನಡುವೆಯೂ, ನಾನು ಸ್ವತಂತ್ರ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದೇನೆ ಎಂದು ನವನೀತ್ ರಾಣಾ ಅವರು ಹೇಳಿದ್ದಾರೆ.

ನವನೀತ್ ರಾಣಾ 2019ರಲ್ಲಿ ಎನ್‌ಸಿಪಿ ಬೆಂಬಲಿತ ಸ್ವತಂತ್ರ ಅಭ್ಯರ್ಥಿಯಾಗಿ ಅಮರಾವತಿಯಿಂದ ಕಣಕ್ಕಿಳಿದು ಗೆಲುವನ್ನು ಸಾಧಿಸಿದ್ದರು. ಈ ಬಾರಿ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ.

ನವನೀತ್ ರಾಣಾ ಅವರ ಹೇಳಿಕೆ ವೈರಲ್ ಆಗುತ್ತಿದ್ದಂತೆ ಪ್ರತಿಪಕ್ಷಗಳಾದ ಎನ್‌ಸಿಪಿ (ಶರದ್ ಪವಾರ್ ಬಣ) ಮತ್ತು ಶಿವಸೇನೆ (ಉದ್ಧವ್ ಬಣ) ತಕ್ಷಣವೇ ಪ್ರತಿಕ್ರಿಯಿಸಿದ್ದು, ನವನೀತ್ ರಾಣಾ ಸತ್ಯವನ್ನು ಮಾತನಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

## ಟಿಎಂಸಿಯನ್ನು ಭ್ರಷ್ಟ ಎನ್ನುವ ಮೋದಿ ಕನ್ನಡಿ ನೋಡಿಕೊಳ್ಳಬೇಕು; ಅವರ ಪಕ್ಷ ಡಕಾಯಿತರಿಂದ ತುಂಬಿದೆ

**■ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ**

ಪಶ್ಚಿಮ ಬಂಗಾಳದಲ್ಲಿ ಕೇಂದ್ರ ತಂಡಗಳು ನಡೆಸಿರುವ ತನಿಖೆಗಳ ಕುರಿತು ಶ್ವೇತಪತ್ರ ಹೊರಡಿಸುವಂತೆ ಒತ್ತಾಯಿಸಿದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, "ತಮ್ಮ ಟಿಎಂಸಿ ಭ್ರಷ್ಟಾಚಾರದ ಆರೋಪ ಮಾಡುವ ಪ್ರಧಾನಿ ನರೇಂದ್ರ ಮೋದಿ ಅವರು ಮೊದಲು ಕನ್ನಡಿಯಲ್ಲಿ ನೋಡಿಕೊಳ್ಳಲಿ; ಅವರ ಪಕ್ಷ ಡಕಾಯಿತರಿಂದ ತುಂಬಿದೆ" ಎಂದು ಮಂಗಳವಾರ ವಾಗ್ದಾಳಿ ನಡೆಸಿದರು.

ಜಲ್ಪೈಗುರಿ ಜಿಲ್ಲೆಯ ಮೈನಾಗೂರಿನಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಬ್ಯಾನರ್ಜಿ, 'ರಾಜ್ಯದಲ್ಲಿ ಬಿಜೆಪಿ ವಿರುದ್ಧ ಹೋರಾಡುತ್ತಿರುವುದು ಟಿಎಂಸಿ. ಆದರೆ, ಸಿಪಿಐ(ಎಂ) ಮತ್ತು ಕಾಂಗ್ರೆಸ್ ಅವರೊಂದಿಗೆ ಕೆಲಸ ಮಾಡುತ್ತಿವೆ ಎಂದು



ಆರೋಪ ಮಾಡಿದರು.

"ಭ್ರಷ್ಟಾಚಾರದ ಆರೋಪದ ಬಗ್ಗೆ ತನಿಖೆ ನಡೆಸಲು ಬಿಜೆಪಿ 300 ಕೇಂದ್ರ ತಂಡಗಳನ್ನು ಬಂಗಾಳಕ್ಕೆ ಕಳುಹಿಸಿದೆ. ಆದರೆ, ಅವರಿಗೆ ಏನನ್ನೂ ಹುಡುಕಲು ಸಾಧ್ಯವಾಗಿಲ್ಲ. ಈಗ, ಪ್ರಧಾನಿ ಮೋದಿ ಬಂಗಾಳದ ಜನರಿಗೆ ಉತ್ತರಿಸಬೇಕಾಗಿದೆ, ಮನರೇಗಾ ನಿಧಿಗೆ ಏನಾಯಿತು? ಬಡವರು ಈ ಯೋಜನೆಯಡಿ ಕೆಲಸ ಮಾಡಿದರು. ಆದರೆ ಅವರಿಗೆ ಕೇಂದ್ರದಿಂದ ಕೂಲಿ ಪಾವತಿಸಿಲ್ಲ" ಎಂದು ಅವರು ಹೇಳಿದರು.

"ಟಿಎಂಸಿ ಪಕ್ಷವನ್ನು ಭ್ರಷ್ಟ ಎಂದು ಪಿಎಂ ಹೇಳುತ್ತಾರೆ; ಅವರು ಮೊದಲು ಕನ್ನಡಿಯಲ್ಲಿ ನೋಡಿಕೊಳ್ಳಬೇಕು. ಅವರ ಪಕ್ಷ ಡಕಾಯಿತರಿಂದ ತುಂಬಿದೆ" ಎಂದು ಅವರು ಹೇಳಿದರು.

ನೋಟು ಅಮಾನ್ಯೀಕರಣದ ವಿಷಯವನ್ನು ಪ್ರಸ್ತಾಪಿಸಿದ ಅವರು, "ನೋಟು ನಿಷೇಧದಿಂದ ಯಾರಿಗೆ ಲಾಭವಾಗಿದೆ" ಎಂದು ಪ್ರಶ್ನಿಸಿದರು. ಬಿಜೆಪಿಯನ್ನು "ಬಂಗಾಳಿ ವಿರೋಧಿ ಪಕ್ಷ" ಎಂದು ಕರೆದ ಅವರು, ಬಿಜೆಪಿ ಎನ್‌ಆರ್‌ಸಿ ವೇಷದಲ್ಲಿ ಆದಿವಾಸಿಗಳು, ದಲಿತರು ಮತ್ತು ಒಬಿಸಿಗಳನ್ನು ಓಡಿಸಲು ಯೋಜಿಸುತ್ತಿದೆ. ನಾವು ಬಂಗಾಳದಲ್ಲಿ ಎನ್‌ಆರ್‌ಸಿಯನ್ನು ಅನುಮತಿಸುವುದಿಲ್ಲ ಎಂದು ಅವರು ಪ್ರತಿಪಾದಿಸಿದರು.

### ಹಾವೇರಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಆಮ್ ಆದ್ಮಿ ಪಕ್ಷದ ಬೆಂಬಲ

# ಪಕ್ಷದ ಗೆಲುವಿಗೆ ಮತ್ತಷ್ಟು ಬಲ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಆಮ್ ಆದ್ಮಿ ಪಕ್ಷ ನೈತಿಕ, ಸೈದ್ಧಾಂತಿಕವಾಗಿ ತನ್ನದೇ ಆದ ನೆಲೆಗಟ್ಟನ್ನು ಹೊಂದಿರುವ ರಾಷ್ಟ್ರೀಯ ಪಕ್ಷವಾಗಿ ಬೆಳೆದಿದೆ. ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಜಿಲ್ಲೆಯ ಆಮ್ ಆದ್ಮಿ ಪಕ್ಷದಿಂದ ಬೆಂಬಲ ಸೂಚಿಸುತ್ತಿರುವುದು ಪಕ್ಷದ ಗೆಲುವಿಗೆ ಮತ್ತಷ್ಟು ಬಲ ನೀಡಲಿದೆ ಎಂದು ಮಾಜಿ ಶಾಸಕ ಹಾಗೂ ಕಾಂಗ್ರೆಸ್ ಪಕ್ಷದ ಗದಗ ಜಿಲ್ಲಾ ಮಾಜಿ ಅಧ್ಯಕ್ಷ ಜಿ.ಎಸ್. ಗಡ್ಡದೇವರಮಠ ಹೇಳಿದರು.

ಅವರು ತಮ್ಮ ನಿವಾಸದಲ್ಲಿ ಗದಗ ಜಿಲ್ಲೆಯ ಆಮ್ ಆದ್ಮಿ ಪಾರ್ಟಿಯ ಕಾರ್ಯಕರ್ತರು, ಮುಖಂಡರು ಕಾಂಗ್ರೆಸ್ ಪಕ್ಷದ



ಅಭ್ಯರ್ಥಿಗೆ ಬೆಂಬಲ ಸೂಚಿಸಿದ ಸಂದರ್ಭದಲ್ಲಿ ಅವರನ್ನು ಸ್ವಾಗತಿಸಿ ಮಾತನಾಡಿದರು.

ಆಮ್ ಆದ್ಮಿ ಕಾರ್ಯಕರ್ತರು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಸೂಚಿಸಿರುವುದು ಒಂದು ದೊಡ್ಡ ಶಕ್ತಿ ಬಂದಂತಾಗಿದೆ. ಇಂಡಿಯಾ ಒಕ್ಕೂಟದಲ್ಲಿ ಕಾಂಗ್ರೆಸ್ ಪಕ್ಷದೊಂದಿಗೆ ಆಮ್ ಆದ್ಮಿ ಪಕ್ಷ ಸೇರಿ ಕೆಲಸ ಮಾಡುತ್ತಿವೆ ಹಾಗೆಯೇ ಇಲ್ಲಿಯೂ ಸಹ ಒಟ್ಟಾಗಿ ಕ್ಷೇತ್ರದಲ್ಲಿ ಸಂಚಾರ ಮಾಡಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಶ್ರಮಿಸೋಣ ಎಂದರು.

ಕಾಂಗ್ರೆಸ್ ಮುಖಂಡರಾದ ಚನ್ನಪ್ಪ ಜಗಲಿ, ವಿರೂಪಾಕ್ಷಪ್ಪ ಪಡಗೇರಿ, ಗುರುನಾಥ ದಾನಪ್ಪನವರ, ಶರಣು ಗೋಡಿ, ಕಿರಣ ನವಲೆ, ರಾಜು ಹೊಳಲಾಪುರ, ಶಿವಾನಂದ ಲಿಂಗಶೆಟ್ಟಿ, ಕೆ.ಓ. ಹುಲಿಕಟ್ಟಿ, ಮಹಾಂತೇಶ ತೋಟದ, ಮುದಕಣ್ಣ ಗದ್ದಿ, ಮೋಹನ ನಂದೆಣ್ಣನವರ, ಎಎಪಿ ಸದಸ್ಯರಾದ ಅಶೋಕ ಉಳ್ಳಾಗಡ್ಡಿ, ರಾಹುಲ ಮಡಿವಾಳರ, ಷಣ್ಮುಖ ಬಡ್ನಿ, ಬಸವರಾಜ ಬಡ್ನಿ, ಮೌಲಾಸಾಬ್ ಜಾಲವಾಡಗಿ, ಸುಭಾಷಚಂದ್ರ ಕುಂಬಾರ, ಶಿವಣ್ಣ ಹಳ್ಳಿಗುಡಿ ಮುಂತಾದವರಿದ್ದರು.

> ಗದಗ ಜಿಲ್ಲಾ ಎಎಪಿ ಮುಖಂಡ ಮಲ್ಲಿಕಾರ್ಜುನ ದೊಡ್ಡಮನಿ ಮಾತನಾಡಿ, ರಾಷ್ಟ್ರಮಟ್ಟದಲ್ಲಿ ಇಂಡಿಯಾ ಒಕ್ಕೂಟದಲ್ಲಿ ಎಎಪಿ ಸೇರಿಕೊಂಡಿದ್ದು, ಅದರಂತೆ ಹಾವೇರಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಪಕ್ಷದ ಕಾರ್ಯಕರ್ತರು ಬೆಂಬಲ ನೀಡಿ ಅವರ ಗೆಲುವಿಗಾಗಿ ಶ್ರಮಿಸುತ್ತೇವೆ ಎಂದರು.

## ಬೇಸಿಗೆ ಶಿಬಿರ ಮುಕ್ತಾಯ ಸಮಾರಂಭ




**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ವಿದ್ಯಾರ್ಥಿಗಳು ಏಕಾಗ್ರತೆಯನ್ನು ಮೈಗೂಡಿಸಿಕೊಂಡರೆ ಮಾತ್ರ ಅವರಿಗೆ ಮೌಲ್ಯಯುತ ಮತ್ತು ನೈತಿಕ ಶಿಕ್ಷಣ ದೊರೆಯಲು ಸಾಧ್ಯವಾಗುತ್ತದೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಶಾಖೆಯ ಸಂಚಾಲಕಿ ಬಿ.ಕೆ. ಸರೋಜಕ್ಕ ಹೇಳಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಶಾಖೆಯಲ್ಲಿ ಕಳೆದ 10 ದಿನಗಳಿಂದ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳ ಬೇಸಿಗೆ ಶಿಬಿರ ಮುಕ್ತಾಯ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದು ಮಕ್ಕಳಲ್ಲಿ ಮುಖ್ಯವಾಗಿ ಬೇಕಾಗಿರುವ ನೈತಿಕ ಮತ್ತು ಮೌಲ್ಯಯುತ ಶಿಕ್ಷಣ ಇಲ್ಲದ್ದರಿಂದ ಭವಿಷ್ಯದಲ್ಲಿ ಅವರು ದುಶ್ಚಟಕ್ಕೆ ದಾಸರಾಗುತ್ತಿದ್ದಾರೆ. ದುಶ್ಚಟದಿಂದ ದೂರ ಉಳಿಬೇಕಾದರೆ ಪ್ರಾಥಮಿಕ ಶಿಕ್ಷಣದಿಂದಲೇ ಉತ್ತಮ ಸಂಸ್ಕಾರ, ಒಳ್ಳೆಯ ನಡತೆ, ಹಿರಿಯರಿಗೆ ಗೌರವ, ಸಾತ್ವಿಕ ಆಹಾರ ಸೇವನೆ, ಉತ್ತಮ ದಿನಚರಿ, ಒಳ್ಳೆಯ ಸ್ನೇಹವನ್ನು ಬೆಳೆಸಿಕೊಳ್ಳುವುದರಿಂದ ಈ ಸಮಾಜಕ್ಕೆ ಸದೃಡವಾದ ನಾಗರಿಕರನ್ನಾಗಿ ಮಾಡಬಹುದು ಎಂದರು.


5ನೇ ತರಗತಿಯಿಂದ 9ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣ, ಮೌಲ್ಯಯುಕ್ತ ಆಟಗಳು, ಹಾಡುಗಳು, ಶ್ಲೋಕಗಳ ಕಂಠಪಾಠ, ಜ್ಞಾಪಕ ಶಕ್ತಿ, ಏಕಾಗ್ರತೆ, ದೃಢತೆ, ಇಚ್ಛಾಶಕ್ತಿಯನ್ನು ವೃದ್ಧಿ ಮಾಡಿಕೊಳ್ಳುವುದು ಮತ್ತು ರಾಜಯೋಗ ಧ್ಯಾನದ ಬಗ್ಗೆ ತರಬೇತಿ ನೀಡಲಾಯಿತು. ಭಾಗವಹಿಸಿದ ಮಕ್ಕಳಿಗೆ ಪ್ರಮಾಣಪತ್ರ ನೀಡಲಾಯಿತು. ಡಾ. ವೈಶಾಲಿ ಬಿರಾದಾರ, ಕೆ.ಸಿ. ಹಿರೇಮಠ, ಸಿದ್ದಪ್ಪ ಚಬ್ಬರಭಾವಿ ಸೇರಿದಂತೆ ದೈವಿ ಪರಿವಾರದವರು ಉಪಸ್ಥಿತರಿದ್ದರು.

## ಬಿಜೆಪಿಗೆ ಸಂಸದ ಸಂಗಣ್ಣ ಕರಡಿ ರಾಜೀನಾಮೆ: ಕಾಂಗ್ರೆಸ್ ಸೇರ್ಪಡೆ ಸಾಧ್ಯತೆ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಲೋಕಸಭೆ ಚುನಾವಣೆಯಲ್ಲಿ ಕೊಪ್ಪಳ ಕ್ಷೇತ್ರದ ಟಿಕೆಟ್ ಕೈತಪ್ಪಿದ ಹಿನ್ನೆಲೆ ಬಿಜೆಪಿ ವಿರುದ್ಧ ಮುನಿಸಿಕೊಂಡಿದ್ದ ಹಾಲಿ ಸಂಸದ ಸಂಗಣ್ಣ ಕರಡಿ ಅವರು ತಮ್ಮ ಸಂಸದ ಸ್ಥಾನಕ್ಕೆ ಮತ್ತು ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ.

ಅವರು ಇಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಇ-ಮೇಲ್ ಮೂಲಕ ರಾಜಿನಾಮೆ ಪತ್ರ ಸಲ್ಲಿಕೆ ಮಾಡಿದ್ದಾರೆ ಎಂದು ತಿಳಿದು



ಬಂದಿದೆ. ಅವರು ಕಾಂಗ್ರೆಸ್ ಸೇರ್ಪಡೆಯಾಗುವ ಸಾಧ್ಯತೆ ಇದೆ.

ಈ ಕುರಿತು ಮಾಹಿತಿ ನೀಡಿದ ಸಂಗಣ್ಣ ಕರಡಿ, ಲೋಕಸಭೆ ಸ್ಪೀಕರ್ ಆಗಿದ್ದ ಓಂ ಬಿರ್ಲಾ ಅವರಿಗೆ ಇ-ಮೇಲ್ ಮೂಲಕ ರಾಜೀನಾಮೆ ಪತ್ರ ಸಲ್ಲಿಸಿದ್ದೇನೆ. ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಪಕ್ಷದ ಪ್ರಾಥಮಿಕ ಸ್ಥಾನಕ್ಕೆ ರಾಜೀನಾಮೆ ನೀಡುವ ಬಗ್ಗೆ ಪತ್ರ ಬರೆದಿದ್ದೇನೆ ಎಂದು ಹೇಳಿದ್ದಾರೆ.

ಬಿಜೆಪಿ ಸಂಸದರಾಗಿದ್ದ ಸಂಗಣ್ಣ ಕರಡಿ ಅವರಿಗೆ ಟಿಕೆಟ್ ನೀಡದೆ ಕೊಪ್ಪಳದಿಂದ ಬಿಜೆಪಿ ಈ ಭಾರಿ ಡಾ. ಬಸವರಾಜ ಕ್ಯಾವಟರ್ ಅವರಿಗೆ ಟಿಕೆಟ್ ನೀಡಿತ್ತು. ಇದರಿಂದ ಅವರು ಪಕ್ಷದ ರಾಜ್ಯ ನಾಯಕರ ವಿರುದ್ಧ ಸಿಡಿದೆದ್ದಿದ್ದರು. ಬಿ.ಎಸ್. ಯಡಿಯೂರಪ್ಪ, ಪ್ರಲ್ಹಾದ ಜೋಶಿ, ಬಸವರಾಜ ಬೊಮ್ಮಾಯಿ, ವಿಜಯೇಂದ್ರ ಸೇರಿದಂತೆ ಹಲವು ನಾಯಕರು ಸಂಗಣ್ಣ ಕರಡಿ ಜೊತೆ ಮಾತುಕತೆ ನಡೆಸಿ ಮನವೊಲಿಕೆಗೆ ಪ್ರಯತ್ನಿಸಿದ್ದರು. ಆದರೆ ಅವರು ಕಾಂಗ್ರೆಸ್ ಸೇರ್ಪಡೆಗೊಳ್ಳುವ ನಿರ್ಧಾರಕ್ಕೆ ಬಂದಿದ್ದಾರೆ ಎನ್ನಲಾಗಿದೆ.

## 'ನಾವು ಬ್ಯಾಲೆಟ್ ಪೇಪರ್‌ಗೆ ಹಿಂತಿರುಗಬಹುದು..': ಸುಪ್ರೀಂ ಮುಂದೆ ವಾದಿಸಿದ ಪ್ರಶಾಂತ್ ಭೂಷಣ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಇವಿಎಂಗಳನ್ನು ಟ್ಯಾಂಪ ರಿಂಗ್ ಮಾಡುವವರಿಗೆ ಯಾವುದೇ ಕಠಿಣ ಶಿಕ್ಷೆಗೆ ಅವಕಾಶವಿಲ್ಲ ಎಂಬುದನ್ನು ಗಮನಿಸಿದ ನ್ಯಾಯಮೂರ್ತಿ ಖನ್ನಾ, "ಇದು ಗಂಭೀರವಾಗಿದೆ; ಶಿಕ್ಷೆಯ ಭಯ ಇರಬೇಕು" ಎಂದು ಚುನಾವಣಾ ಆಯೋಗಕ್ಕೆ ಸೂಚನೆ ನೀಡಿದರು. ವಿವಿಪ್ಯಾಟ್ ವ್ಯವಸ್ಥೆಯ ಮೂಲಕ ರಚಿಸಲಾದ ಪೇಪರ್ ಸ್ಲಿಪ್‌ಗಳೊಂದಿಗೆ ವಿದ್ಯುನ್ಮಾನ ಮತಯಂತ್ರಗಳಲ್ಲಿ (ಇವಿಎಂ) ಚಲಾವಣೆಯಾದ ಮತಗಳ ಅಡ್ಡ ಪರಿಶೀಲನೆಗೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ರಹಸ್ಯ ಮತದಾನದ ವಿಧಾನದಲ್ಲಿನ ಸಮಸ್ಯೆಗಳನ್ನು ಎತ್ತಿ ತೋರಿಸಿದೆ.

"ನಾವು ನಮ್ಮ 60ರ ದಶಕದಲ್ಲಿದ್ದೇವೆ; ಬ್ಯಾಲೆಟ್ ಪೇಪರ್‌ಗಳು ಇದ್ದಾಗ ಏನಾಯಿತು ಎಂಬುದು ನಮಗೆಲ್ಲರಿಗೂ ತಿಳಿದಿದೆ. ನಾವು ಮರೆತಿಲ್ಲ" ಎಂದು ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಅರ್ಜಿದಾರರಲ್ಲಿ ಒಬ್ಬರಾದ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಪರ ವಕೀಲ ಪ್ರಶಾಂತ್ ಭೂಷಣ್ ಅವರಿಗೆ ತಿಳಿಸಿದರು. ಇವಿಎಂಗಳ ಮೂಲಕ ಮತದಾನ ಮಾಡಲು ಆಯ್ಕೆ ಮಾಡಿಕೊಂಡಿರುವ ಹೆಚ್ಚಿನ ಯುರೋಪಿಯನ್ ರಾಷ್ಟ್ರಗಳು ಪೇಪರ್ ಬ್ಯಾಲೆಟ್‌ಗಳಿಗೆ ಹೇಗೆ ಮರಳಿದವು ಎಂದು ಭೂಷಣ್ ವಾದಿಸಿದರು.

"ನಾವು ಕಾಗದದ ಮತಪತ್ರಗಳಿಗೆ ಹಿಂತಿರುಗಬಹುದು ಅಥವಾ ಮತದಾರರಿಗೆ ವಿವಿಪ್ಯಾಟ್ ಸ್ಲಿಪ್ ನೀಡುವುದು ಮತ್ತೊಂದು ಆಯ್ಕೆಯಾಗಿದೆ. ಇಲ್ಲದಿದ್ದರೆ, ಚೀಟಿಗಳು ಯಂತ್ರಕ್ಕೆ ಬೀಳುತ್ತವೆ ಮತ್ತು ನಂತರ ಸ್ಲಿಪ್ ಅನ್ನು ಮತದಾರರಿಗೆ ನೀಡಬಹುದು. ನಂತರ ಅವುಗಳನ್ನು ಮತ ಪೆಟ್ಟಿಗೆಗೆ ಹಾಕಬಹುದು. ನಂತರ ವಿವಿಪ್ಯಾಟ್ ವಿನ್ಯಾಸವನ್ನು ಬದಲಾಯಿಸಲಾಯಿತು. ಅದು ಪಾರದರ್ಶಕ ಗಾಜಿನಾಗಿರಬೇಕು, ಆದರೆ ಅದನ್ನು ಡಾರ್ಕ್ ಅಪಾರದರ್ಶಕ ಕನ್ನಡಿ ಗಾಜಿನಂತೆ ಬದಲಾಯಿಸಲಾಯಿತು, ಅಲ್ಲಿ ಅದು 7 ಸೆಕೆಂಡುಗಳ ಕಾಲ ಬೆಳಕು ಇದ್ದಾಗ ಮಾತ್ರ ಗೋಚರಿಸುತ್ತದೆ" ಎಂದು ಸಮಸ್ಯೆಯನ್ನು ಕೋರ್ಟ್ ಗಮನಕ್ಕೆ ತಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka